# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –252 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 30–04–2025 ಬುಧವಾರ | ಪುಟ: 4 | ಬೆಲೆ : ರೂ.2–00

Volume - 02 Issue - 252 | RNI No: KARKAN/2023/88462 | KA/SK/CTA-874/2024-2026 | Chitradurga | Date: 30-04-2025 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ವರ್ಗರಹಿತ ಸಮಾಜ ಸೃಷ್ಟಿಯಾಗಲು ಬಸವತತ್ವ ಶರಣರುಗಳೇ ದಾರಿ: ಸಂಸದ 2

ಶೀಘ್ರದಲ್ಲೇ ರಾಜ್ಯಮಟ್ಟದ ಡಿಜಿಟಲ್ ಮಾಧ್ಯಮ ಸಮ್ಮೇಳನ 3

ದಾವಣಗೆರೆ ಜಿಲ್ಲೆ ಅಭಿವೃದ್ಧಿ ಹೊಂದಿದ ಪ್ರದೇಶವಾದರೂ, ಚನ್ನಗಿರಿ ಹಿಂದುಳಿದಿದೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### 1ರಂದು ಕಾರ್ಮಿಕ ದಿನಾಚರಣೆಯ ದಿನ ವೇತನ ಸಹಿತ ರಜೆ

» **ಚಿತ್ರದುರ್ಗ**

ಕರ್ನಾಟಕ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಹಬ್ಬ ಮತ್ತು ರಜಾ ದಿನಗಳ) ಕಾಯ್ದೆ 1963ರ ಕಲಂ 3 ಹಾಗೂ ಕರ್ನಾಟಕ ನಿಯಮಗಳು 1964ರ ನಿಯಮ 9ರ ಮೇರೆಗೆ ಚಿತ್ರದುರ್ಗ ಜಿಲ್ಲೆಯಾದ್ಯಂತ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು, ಹೋಟೆಲ್, ರೆಸ್ಟೋರೆಂಟ್‌ಗಳು, ಕಾರ್ಖಾನೆಗಳು, ಕೈಗಾರಿಕಾ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳು ಮೇ 01ರಂದು ಕಾರ್ಮಿಕ ದಿನಾಚರಣೆಯ ದಿನದಂದು ತಮ್ಮಲ್ಲಿ ಕೆಲಸ ಮಾಡುವ ಎಲ್ಲಾ ನೌಕರರಿಗೆ ವೇತನ ಸಹಿತ ರಜೆಯನ್ನು ನೀಡುವುದು. ಕಾರ್ಮಿಕ ದಿನಾಚರಣೆ ದಿನದಂದು ಕಾರ್ಮಿಕರ ಒಪ್ಪಿಗೆಯನ್ನು ಪಡೆದು ಆ ಕಾರ್ಮಿಕರು ಕೆಲಸ ನಿರ್ವಹಿಸಿದ್ದಲ್ಲಿ ಕಾರ್ಯನಿರ್ವಹಿಸಿದ ಕಾರ್ಮಿಕರಿಗೆ ದುಪ್ಪಟ್ಟು ವೇತನ ನೀಡಲು ಸೂಚಿಸಿದೆ. ಈ ನಿಯಮಗಳನ್ನು ಉಲ್ಲಂಘಿಸಿದಲ್ಲಿ ಸಂಬಂಧಪಟ್ಟ ಸಂಸ್ಥೆ, ನಿಯೋಜಕರ ವಿರುದ್ಧ ನಿಯಾಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಚಿತ್ರದುರ್ಗ ಕಾರ್ಮಿಕ ಅಧಿಕಾರಿ ಅನಿಲ್ ಬಿ ಬಗಟಿ ತಿಳಿಸಿದ್ದಾರೆ.

### ಶ್ರೀ ಬಸವೇಶ್ವರ ಜಯಂತಿ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಜಯಂತಿ ಇದೇ ಏಪ್ರಿಲ್ 30ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಕಾರ್ಯಕ್ರಮದ ಉದ್ಘಾಟನೆ



ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ. ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ. ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ. ಎಂ. ಚಂದ್ರಪ್ಪ, ವಿಧಾನಪರಿಷತ್ ಸದಸ್ಯರುಗಳಾದ ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಡಿ.ಟಿ. ಶ್ರೀನಿವಾಸ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ. ಬಿ. ಯೋಗೇಶ್ ಬಾಬು, ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ವೀರಶೈವ ಸಮಾಜದ ಅಧ್ಯಕ್ಷ ಹೆಚ್.ಎನ್.ತಿಪ್ಪೇಸ್ವಾಮಿ, ಕಾರ್ಯದರ್ಶಿ ಪಿ.ವೀರೇಂದ್ರ ಕುಮಾರ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಶಿವಮೂರ್ತಿ ಮಹಡಿ, ಪ್ರಧಾನ ಕಾರ್ಯದರ್ಶಿ ಎಂ.ಶಶಿಧರ ಬಾಬು, ವೀರಶೈವ ಲಿಂಗಾಯತ ಮಹಾಸಭಾ ಖಜಾಂಚಿ ಜಾಲಿಕಟ್ಟೆ ರುದ್ರಪ್ಪ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಚುನಾಯಿತ ನಗರಸಭಾ ಸದಸ್ಯರು ಹಾಗೂ ಜಿಲ್ಲೆಯ ವೀರಶೈವ ಸಮಾಜದ ಮುಖಂಡರು, ಗಣ್ಯರು ಪಾಲ್ಗೊಳ್ಳುವರು. ಚಿತ್ರದುರ್ಗ ಜ್ಞಾನಭಾರತಿ ವಿದ್ಯಾಸಂಸ್ಥೆ ಪ್ರಾಂಶುಪಾಲ ಡಾ.ಬಿ.ಎಂ.ಪ್ರಜ್ವಲ್ ಉಪನ್ಯಾಸ ನೀಡುವರು. ಚಿತ್ರದುರ್ಗದ ಶ್ರೀ ಗಾನಯೋಗಿ ಸಂಗೀತ ಬಳಗದಿಂದ ಗೀತಗಾಯನ ನಡೆಯಲಿದೆ. ಬಸವೇಶ್ವರ ಜಯಂತಿ ಅಂಗವಾಗಿ ಅಂದು ಸಂಜೆ 3ಕ್ಕೆ ಚಿತ್ರದುರ್ಗ ನಗರದ ನೀಲಕಂಠೇಶ್ವರ ದೇವಸ್ಥಾನದಿಂದ ವಿವಿಧ ಕಲಾ ತಂಡಗಳೊಂದಿಗೆ ಕರ್ನಾಟಕದ ಸಾಂಸ್ಕೃತಿಕ ನಾಯಕರಾದ ವಿಶ್ವಗುರು ಶ್ರೀ ಬಸವೇಶ್ವರರ ಭಾವಚಿತ್ರ ಮೆರವಣಿಗೆ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಿ.ಎಂ. ಗುರುನಾಥ ತಿಳಿಸಿದ್ದಾರೆ.

ಆಡಳಿತಾಧಿಕಾರಿಗಳ ಹುದ್ದೆ ಖಾಲಿ ಇಲ್ಲದಂತೆ ಭರ್ತಿ ಮಾಡಲಾಗುವುದು

# ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿ ಒಂದು ರೂ. ಲಂಚ ಪಡೆಯದೇ ಮಾಡಲಾಗಿದೆ: ಸಿಎಂ

» **ಬೆಂಗಳೂರು**

ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿಯನ್ನು ಒಂದು ರೂಪಾಯಿ ಲಂಚವಿಲ್ಲದೇ, ಮಧ್ಯವರ್ತಿಗಳ ಹಾವಳಿಯಿಲ್ಲದೇ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.




ಅವರು ಇಂದು ಕಂದಾಯ ಇಲಾಖೆಯಲ್ಲಿ ನೂತನವಾಗಿ ಆಯ್ಕೆಯಾಗಿರುವ 1000 ಗ್ರಾಮ ಆಡಳಿತಾಧಿಕಾರಿಗಳಿಗೆ ನೇಮಕಾತಿ ಆದೇಶ ವಿತರಣೆ, ಅಭಿಶಿಕ್ಷಣ ತರಬೇತಿ ಮತ್ತು 4000 ಕ್ರೋಮ್ ಬುಕ್ ವಿತರಣೆ ಹಾಗೂ ಸಾಧನೆಯ ಹಾದಿಯಲ್ಲಿ ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದರು.

ಹಿಂದೆ94–95ರಲ್ಲಿಗೋವಿಂದೇಗೌಡರು ಇದ್ದ ಸಂದರ್ಭದಲ್ಲಿ ಒಂದು ಲಕ್ಷ ಉಪಾಧ್ಯಾಯರನ್ನು ಲಂಚವಿಲ್ಲದೇ, ಮಧ್ಯವರ್ತಿಗಳಿಲ್ಲದೇ ನೇಮಕಾತಿ ಮಾಡಲಾಗಿತ್ತು. ಪ್ರಸ್ತುತ ಆರು ಲಕ್ಷ ಅರ್ಜಿಗಳಲ್ಲಿ ಒಂದು ಸಾವಿರ ಗ್ರಾಮ ಆಡಳಿತಾಧಿಕಾರಿಗಳು ಆಯ್ಕೆಯಾಗಿದ್ದು, ಆಯ್ಕೆಯಾಗಿರುವವರು ಪುಣ್ಯವಂತರು. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸಿದ ಪರೀಕ್ಷೆಯಲ್ಲಿ ಮೆರಿಟ್ ಆಧಾರದ ಮೇಲೆ ಆಯ್ಕೆಯಾಗಿದ್ದೀರಿ. 9834 ಒಟ್ಟು ಗ್ರಾಮ ಆಡಳಿತಾಧಿಕಾಗಳಿದ್ದು, ಅದರಲ್ಲಿ 8003 ಜನ ಕಾರ್ಯನಿರ್ವಹಿಸುತ್ತಿದ್ದಾರೆ.ಈಗ 1000 ಜನ ಸೇರ್ಪಡೆಯಾಗುತ್ತಿದ್ದಾರೆ. ಯಾವುದೇ ಗ್ರಾಮ ಆಡಳಿತಾಧಿಕಾರಿಯ ಹುದ್ದೆ ಖಾಲಿ ಇಲ್ಲದಂತೆ ಭರ್ತಿ ಮಾಡುವ ಕೆಲಸವನ್ನು ಸರ್ಕಾರ ಮಾಡಲಿದೆ ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದರು. ಅಲ್ಲೇ ಇದ್ದು ಸಾಧ್ಯವಾದಷ್ಟು ಮಟ್ಟಿಗೆ ಗ್ರಾಮಗಳಲ್ಲಿಯೇ ವಾಸ ಮಾಡುವುದು ಉತ್ತಮ ಎಂದರು.

**ದಾಖಲೆಗಳನ್ನು ಕರಾರುವಾಕ್ಕಾಗಿಡುವುದು ಅವಶ್ಯಕ:** ನಮ್ಮ ದೇಶ ಗ್ರಾಮಗಳ ದೇಶ. ಕೃಷಿ ಪ್ರಮುಖವಾದ ಉದ್ಯೋಗವಾಗಿದ್ದು, ಹೆಚ್ಚು ಶೇ 60 ಕ್ಕೂ ಹೆಚ್ಚು ಜನ ಕೃಷಿಯ ಮೇಲೆ ಅವಲಂಬಿತರಾಗಿದ್ದಾರೆ. ಜಮೀನುಗಳ ಲೆಕ್ಕ ಇಡುವುದು ಗ್ರಾಮ ಆಡಳಿತಾಧಿಕಾರಿಗಳ ಜವಾಬ್ದಾರಿ. ಹಳ್ಳಿಗಳಲ್ಲಿ ಶಾಂತಿ, ನೆಮ್ಮದಿ ನೆಲೆಸಲು ದಾಖಲಾತಿಗಳು ಸರಿಯಾಗಿರಬೇಕು. ದಾಖಲೆಗಳನ್ನು ಬಹಳ ಕರಾರುವಾಕ್ಕಾಗಿ ಇಡುವುದು ಅವಶ್ಯಕ. ಆಧುನಿಕ ನಾಡಿನಲ್ಲಿ ತಂತ್ರಜ್ಞಾನ, ವಿಜ್ಞಾನ ಬೆಳೆದಿದೆ. ಈಗ ಪ್ರತಿಯೊಂದೂ ಡಿಜಿಟಲೀಕರಣವಾಗಿದೆ. ಆನ್ ಲೈನ್ ನಲ್ಲಿ ದಾಖಲಾತಿಗಳನ್ನು ಪಡೆಯುವ ವ್ಯವಸ್ಥೆ ಬಂದ ನಂತರ ನಾವು ಯಾವುದೇ ಕಾರಣಕ್ಕೂ ತಪ್ಪುಗಳಿಗೆ ಅವಕಾಶ ನೀಡಬಾರದು. ಗ್ರಾಮ ಆಡಳಿತಾಧಿಕಾರಿಗಳ ಜವಾಬ್ದಾರಿ ಬಹಳ ಮಹತ್ವದ್ದು. ರೈತರಿಗೂ ಗ್ರಾಮ ಆಡಳಿತಾಧಿಕಾರಿಗಳಿಗೆ ಹತ್ತಿರದ ಸಂಬಂಧವಿದ್ದು, ಪ್ರತಿಯೊಬ್ಬ ರೈತರ ಪರಿಚಯ ಅವರಿಗಿರುತ್ತದೆ. ಅವರ ಭೂಮಿಯ ಕುರಿತು ಮಾಹಿತಿ ಗೊತ್ತಿರುತ್ತದೆ. ಅವರ ಪರಿಚಯವಿಟ್ಟುಕೊಂಡು ಅಗತ್ಯ ದಾಖಲಾತಿಗಳನ್ನು ಒದಗಿಸುವುದು ನಿಮ್ಮ ಕೆಲಸ ಎಂದು ಮುಖ್ಯಮಂತ್ರಿಗಳು ಕರೆ ನೀಡಿದರು.

ಗ್ರಾಮ ಆಡಳಿತಾಧಿಕಾರಿಗಳು ಉತ್ತಮ ನಡತೆ, ಸಂಪರ್ಕವನ್ನು ಹೊಂದಿದ್ದರೆ ರೈತರು ನಿಮ್ಮ ಮಾತನ್ನು ಕೇಳುತ್ತಾರೆ. ಗ್ರಾಮ ಆಡಳಿತಾಧಿಕಾರಿಗಳು ಒಳ್ಳೆ ರೀತಿಯ ಕೆಲಸ ಮಾಡಿಕೊಟ್ಟರೆ ಅವರ ಮೇಲೂ ಗೌರವ ವಿರುತ್ತದೆ. ಜನರ ಕೆಲಸ ದೇವರ ಕೆಲಸ ಎಂದು ನೆನೆಪಿಟ್ಟುಕೊಳ್ಳಬೇಕು. ನಾವಿರುವುದೇ ಜನರ ಸೇವೆಗಾಗಿ ಎನ್ನುವುದನ್ನು ಮರೆಯಬಾರದು. ಆರು ಲಕ್ಷ ಜನ ಸರ್ಕಾರಿ ನೌಕರರು ಅವರಿಗಾಗಿಯೇ ಇರುವುದು. ರಾಜಕಾರಣಿಗಳು, ಜನರಿಂದ ಆಯ್ಕೆಯಾದರೆ, ಸರ್ಕಾರ ದಿಂದ ಆಯ್ಕೆಯಾದ ಸರ್ಕಾರಿ ನೌಕರರು ಜನಸೇವೆಯನ್ನು ಅವರ ಧ್ಯೇಯವಾಗಿಸಬೇಕು. ಕಂದಾಯ ಇಲಾಖೆಯದ್ದು ಅತ್ಯಂತ ಜವಾಬ್ದಾರಿಯುತ ಕೆಲಸ. ಇಲ್ಲಿ ಸುಧಾರಣೆಗಳನ್ನು ತರಬೇಕೆಂದು ಕೃಷ್ಣಬೈರೇಗೌಡರಿಗೆ ಸೂಚಿಸಲಾಗಿತ್ತು,ಅವರು ಈಗಾಗಲೇ ಅನೇಕ ಸುಧಾರಣೆಗಳನ್ನು ತಂದಿದ್ದಾರೆ. ಅವರಿಗೆ ಇನ್ನಷ್ಟು ಸುಧಾರಣೆಗಳನ್ನು ತರುವ ಶಕ್ತಿ ಇದೆ ಎಂದು ನಂಬಿರುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

**ಅಧಿಕಾರಿಗಳು ರೈತರಿಗೆ ಎಲ್ಲ ಸಮಯದಲ್ಲಿಯೂ ಲಭ್ಯವಿರಬೇಕು:** ಗ್ರಾಮ ಆಡಳಿತಾಧಿಕಾರಿಗಳು ತಮ್ಮ ವ್ಯಾಪ್ತಿಯ ಪಂಚಾಯಿತಿಯ ಕೇಂದ್ರಸ್ಥಾನದಲ್ಲಿಯೇ ವಾಸ್ತವ್ಯವಿರುವುದರಿಂದ ರೈತರಿಗೆ ಎಲ್ಲ ಸಮಯದಲ್ಲಿಯೂ ಲಭ್ಯವಿರಲು ಸಾಧ್ಯವಾಗುತ್ತದೆ. ರೈತರ ಮನೆಮನೆಗೆ ಭೇಟಿ ನೀಡಿ ಅವರ ಕುಂದುಕೊರತೆಗಳನ್ನು ಆಲಿಸಬೇಕು. ಗ್ರಾಮ ಆಡಳಿತಾಧಿಕಾರಿಗಳ ಮಂಜೂ 9834 ಮಂಜೂರಾದ ಹುದ್ದೆಗಳಿಗೆ ಲ್ಯಾಪಟಾಪ್ ನೀಡಲು ಸರ್ಕಾರ ನಿರ್ಧರಿಸಿದ್ದು, ಮೊದಲನೇ ಹಂತದಲ್ಲಿ 4000 ಲ್ಯಾಪ್ ಟಾಪ್ ಗಳನ್ನು ಇಂದು ನೀಡಲಾಗುತಿದೆ. ಯಾವುದೇ ಕಾರಣಕ್ಕೆ ರೈತರಿಗೆ ತೊಂದರೆ ಕೊಡುವುದಾಗಲಿ, ಭ್ರಷ್ಟಾಚಾರಕ್ಕಾಗಲಿ ಅವಕಾಶಕೊಡಬಾರದು. ಸಣ್ಣ ಹಿಡುವಳಿದಾರರು ಹೆಚ್ಚಿನ ಸಂಖ್ಯೆಯಲ್ಲಿದ್ದು ಅವರಿಗೆ ಅನುಕೂಲ ಕಲ್ಪಿಸುವುದು ಗ್ರಾಮ ಆಡಳಿತಾಧಿಕಾರಿಗಳ ಜವಾಬ್ದಾರಿಯಾಗಿರುತ್ತದೆ ಎಂದರು.

**ಭೂಮಿ ಬೀಟ್ ಕಾರ್ಯಕ್ರಮ:** ಕೃಷಿ, ಲಾಭದಾಯಕ ವೃತ್ತಿಯಾಗಿ ಉಳಿದುಕೊಂಡಿಲ್ಲ. ಅನ್ನದಾತರ ಹಾಗೂ ನಾಡಿನ ಒಳಿತಿಗೆ ಕೆಲಸ ಮಾಡುತ್ತಿರುವ ಅರಿವಿರಬೇಕು. ರೈತರಿಗೆ ಭೂಮಿ ಬೀಟ್ ಕಾರ್ಯಕ್ರಮ ಸರ್ಕಾರ ಜಾರಿಗೆ ತಂದಿದೆ. ವಿದ್ಯಾರ್ಥಿದೆಸೆಯಲ್ಲಿವ್ಯವಸಾಯಕ್ಕೆಗೊಂಡ ಸಂದರ್ಭದಲ್ಲಿ ಪಕ್ಕದ ರೈತ ಜಮೀನನ್ನು ಅತಿಕ್ರಮಣ ಮಾಡಿದ್ದು, ಈ ಬಗ್ಗೆ ನಡೆದ ಪಂಚಾಯತಿಯ ಬಗ್ಗೆ ತಮ್ಮ ಅನುಭವ ಹಂಚಿಕೊಂಡ ಮುಖ್ಯಮಂತ್ರಿಗಳು, ಜಮೀನುಗಳನ್ನು ಅತಿಕ್ರಮಣದ ಇಂತಹ ಸಮಸ್ಯೆಗಳನ್ನು ನಿವಾರಿಸಲು ಭೂಮಿ ಬೀಟ್ ಕಾರ್ಯಕ್ರಮ ಅನುಕೂಲ ಕಲ್ಪಿಸಿದೆ ಎಂದರು.

**ರೈತರಿಗೆ ಅನ್ಯಾಯವಾಗದಂತೆ ಕಾರ್ಯನಿರ್ವಹಿಸಿ:** ಗ್ರಾಮ ಆಡಳಿತಾಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಿ, ರೈತರಿಗೆ ಅನ್ಯಾಯವಾಗದಂತೆ ಕರ್ತವ್ಯ ನಿರ್ವಹಿಸಬೇಕು. ಜಮೀನಿನ ದಾಖಲಾತಿಗಳ ಹಾಗೂ ಸರ್ವೆಗಳು ಸಮರ್ಪಕವಾಗಿ ನಡೆದರೆ ಗ್ರಾಮಗಳಲ್ಲಿ ಭೂಮಿ ಕಲಹವಿಲ್ಲದೇ ಬಹುಮಟ್ಟಿಗೆ ನೆಮ್ಮದಿ ನೆಲಸಲು ಸಾಧ್ಯವಿದೆ. ಇಂದು ನೇಮಕಗೊಂಡಿರುವ ಗ್ರಾಮ ಆಡಳಿತಾಧಿಕಾರಿಗಳು ಉದಾಸೀನತೆಯ ಭಾವನೆಯನ್ನು ತಳೆಯದೇ ಪ್ರಾಮಾಣಿಕವಾಗಿ ದುಡಿಯಬೇಕು ಎಂದು ತಿಳಿಸಿ ಶುಭಹಾರೈಸಿದರು.

ಹಿಂದೆ ಗ್ರಾಮಗಳಲ್ಲಿ ಜಮೀನಿನ ವಿವರಗಳನ್ನು ಶಾನುಭೋಗರು ಮಾಡುತ್ತಿದ್ದರು. ಶಾನುಭೋಗರು ಎಂದರೆ ರೈತರಿಗೆ ಗುರುಗಳಿದ್ದಂತೆ. ಶಾನುಭೋಗರು ಹೇಳಿದ್ದೇ ಅಂತಿಮ ಎಂಬಂತಿತ್ತು. ಕೆಲವರು ಉತ್ತಮ ಕೆಲಸ ಮಾಡುತ್ತಿದ್ದರೆ, ಕೆಲವರು ಕಿತಾಪತಿಯನ್ನೂ ಮಾಡುತ್ತಿದ್ದರು. ಶಾನುಭೋಗರು ದಾಖಲೆ ಬರೆಯುತ್ತಿದ್ದರು. ಅವರು ಏನು ಬರೆದಿದ್ದರು ಎಂದು ಯಾರಿಗೂ ಓದಿ ಹೇಳುತ್ತಿರಲಿಲ್ಲ. 1978 ರಲ್ಲಿ ತಾಲ್ಲೂಕು ಮಂಡಳಿ ಚುನಾವಣೆಗೆ ನಿಂತಾಗ, ಅವರ ತಂದೆ ನಿಲ್ಲಿಸಬೇಕೋ ಬೇಡವೋ ಎಂದು ಶಾನುಭೋಗರನ್ನು ಕೇಳಿ ನಿಲ್ಲಬಾರದು ಎಂದು ತಮ್ಮ ತಂದೆ ಹಠ ಮಾಡಿದ್ದನ್ನು, ನಂತರ ಗೆದ್ದದ್ದನ್ನು ಸಿಎಂ ಸ್ಮರಿಸಿದರು. ಚುನಾವಣೆಗೆ ಆಗ 3500 ಮಾತ್ರ ವೆಚ್ಚವಾಗಿತ್ತು ಎಂದು ತಿಳಿಸಿದ ಮುಖ್ಯಮಂತ್ರಿಗಳ ಶಾನುಭೋಗರ ಎಷ್ಟು ಪ್ರಭಾವ ಬೀರುತ್ತಿದ್ದರು ಎಂದು ವಿವರಿಸಿದರು.

ಕಂದಾಯ ಇಲಾಖೆ ಸಚಿವ ಕೃಷ್ಣಬೈರೇಗೌಡ, ಶಾಸಕ ಶ್ರೀನಿವಾಸ್, ಮುಖ್ಯಮಂತ್ರಿಗಳ ಅಪರ ಕಾರ್ಯದರ್ಶಿ ಎಲ್.ಕೆ.ಅತೀಕ್ , ಇಲಾಖೆ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕಠಾರಿಯಾ ಉಪಸ್ಥಿತರಿದ್ದರು.

## ವಿಜಯನಗರ ಕಾಲದ ಅಪ್ರಕಟಿತ ಶಾಸನಗಳು ಪತ್ತೆ

» **ಮೊಳಕಾಲ್ಮೂರು**

ತಾಲೂಕಿನ ಅಮಕುಂದಿಯಲ್ಲಿ ವಿಜಯನಗರ ಕಾಲದ ಎರಡು ಅಪ್ರಕಟಿತ ಶಾಸನಗಳು ಪತ್ತೆಯಾಗಿವೆ ಎಂದು ಪ್ರಥಮ ದರ್ಜೆ ಕಾಲೇಜು ಪ್ರಾಧ್ಯಾಪಕ ಡಾ.ಎಸ್.ಕೆ. ಯೋಗಾನಂದ ತಿಳಿಸಿದ್ದಾರೆ.

ತಾಲೂಕಿನ ಕಸಬಾ ಹೋಬಳಿ ಅಮಕುಂದಿಯ ಗ್ರಾಮದ ಹಾಳೂರಿನಲ್ಲಿ ಗ್ರಾಮದಲ್ಲಿ ಒಟ್ಟು ಏಳು ಸಾಲಿನ ಎರಡೂವರೆ ಮೀಟರ್ ಉದ್ದ ಹಾಗೂ 0.45 ಮೀಟರ್ ಅಗಲವಿರುವ ಕಲ್ಲು ಬಂಡೆ ಶಾಸನವು ಪತ್ತೆಯಾಗಿದೆ. ಈ ಶಾಸನವು ವಿಜಯ ನಗರದ ಶಾಲಿವಾಹನ ಶಕೆ ವರ್ಷ 1408 ಅಂದರೆ ಕ್ರಿ.ಶ 1486ರ ಕಾಲಕ್ಕೆ ಸೇರಿದೆ ಎಂದು ಅವರು ತಿಳಿಸಿದ್ದಾರೆ.

ಈ ಶಾಸನದ ಜತೆ ಇದೇ ಗ್ರಾಮದ ಆಂಜನೇಯ ಸ್ವಾಮಿ ದೇವಾಲಯದ ಮುಂಭಾಗದಲ್ಲಿನ ಗರುಡುಗಂಬದ ಆರಂಭದಲ್ಲಿ(ಕೆಳಭಾಗದಿಂದ) 12 ಸಾಲಿನ ವಿಜಯ ನಗರದ ಪ್ರಸಿದ್ಧ ಅರಸ ಶ್ರೀಕೃಷ್ಣ ದೇವರಾಯನ ಹೆಸರನ್ನು ಉಲ್ಲೇಖಿಸಿರುವ 'ಶ್ರೀಕೃಷ್ಣರಾಯುಡು' ಎನ್ನುವ ಹೆಸರಿರುವ ಕನ್ನಡ ಲಿಪಿ ಹಾಗೂ ತೆಲುಗು ಭಾಷೆಯ ಶಾಸನವನ್ನು ಶೋಧನೆ ಮಾಡಲಾಗಿದೆ. ಇದು ಕ್ರಿ.ಶ. 1522ರ ಕಾಲಕ್ಕೆ ಸೇರಿದ್ದು, 22 ಅಡಿ ಉದ್ದವಿರುವ ಸ್ತಂಭ ಶಾಸನವಾಗಿದೆ ಎಂದು ತಿಳಿಸಿದ ಅವರು, ಈ ಶಾಸನವನ್ನು ಬೆಂಗಳೂರು ಮಿಥಿಕ್ ಸೊಸೈಟಿಯ ಶಶಿ ನಾಯಕ ಅವರು ಓದಿದ್ದಾರೆ ಎಂದರು.

## ಮಾದಾಪುರ ಕೆರೆಯಲ್ಲಿ ಬಾದಾಮಿ ಚಲುಕ್ಯರ ಕಾಲದ ಶಿಲಾಶಾಸನ ಪತ್ತೆ

**ದಾವಣಗೆರೆ:** ನ್ಯಾಮತಿ ತಾಲ್ಲೂಕಿನ ಮಾದಾಪುರ ಕೆರೆಯಲ್ಲಿ ಬಾದಾಮಿ ಚಲುಕ್ಯರ ಒಂದನೇ ವಿಕ್ರಮಾದಿತ್ಯನ ಕಾಲದ ಶಿಲಾಶಾಸನ ಪತ್ತೆಯಾಗಿದೆ ಎಂದು ಕಮಲಾಪುರದಲ್ಲಿನ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ನಿರ್ದೇಶಕರಾದ ಡಾ;ಆರ್.ಶೇಜೇಶ್ವರ ತಿಳಿಸಿದ್ದಾರೆ. ಮಾದಾಪುರ ಕೆರೆಯಲ್ಲಿ ಸ್ಥಳೀಯರು ಜೆಸಿಬಿಯಿಂದ ಮಣ್ಣನ್ನು ತೆಗೆಯುವಾಗ ಶಿಲಾ ಶಾಸನ ಪತ್ತೆಯಾಗಿದೆ. ಇಲ್ಲಿಗೆ ಪುರಾತತ್ವ ಇಲಾಖೆ ನಿರ್ದೇಶಕರು ಭೇಟಿ ನೀಡಿ ಪರಿಶೀಲಿಸಿದ ನಂತರ ಇದು ಬಾದಾಮಿ ಚಲುಕ್ಯರ ಶಿಲಾಶಾಸನವಾಗಿದೆ ಎಂದು ತಿಳಿದುಬಂದಿದೆ.

## ಪ್ರಮುಖ ಸುದ್ದಿ

ಮೂರು ಹಂತಗಳಲ್ಲಿ ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ: ಜಿಲ್ಲಾಧಿಕಾರಿ ಟಿ.ವೆಂಕಟೇಶ್

# ಪರಿಶಿಷ್ಟ ಜಾತಿ ಒಳ ಮೀಸಲಾತಿಗೆ ಮೇ 05 ರಿಂದ ಗಣತಿ

» **ಚಿತ್ರದುರ್ಗ**

ಪರಿಶಿಷ್ಟ ಜಾತಿ ಒಳ ಮೀಸಲಾತಿ ಜಾರಿ ಸಂಬಂಧ ಮೇ 05 ರಿಂದ ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ ಕೈಗೊಳ್ಳಲಿದ್ದು, ಈ ಸಮೀಕ್ಷೆಯು ಮೂರು ಹಂತಗಳಲ್ಲಿ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ಮೊದಲ ಹಂತದ ಸಮೀಕ್ಷೆಯನ್ನು ಮೇ 05 ರಿಂದ 17 ರವರೆಗೆ ಮನೆ–ಮನೆ ಭೇಟಿ ನೀಡಿ ಸಮೀಕ್ಷಾ ಕಾರ್ಯ ಕೈಗೊಳ್ಳುವುದು. ಎರಡನೇ ಹಂತವು ಮೇ 19 ರಿಂದ 21 ರವರೆಗೆ ಸಮೀಕ್ಷೆ ಬ್ಲಾಕ್‌ಗಳಲ್ಲಿ ವಿಶೇಷ ಶಿಬಿರಗಳನ್ನು ಕೈಗೊಂಡು, ಮನೆ ಭೇಟಿಯಲ್ಲಿ ಬಿಟ್ಟುಹೋದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿಯನ್ನು ಸಂಗ್ರಹಿಸುವುದು. ಮೂರನೇ ಹಂತ ಮೇ 19 ರಿಂದ 21 ರವರೆಗೆ ಸ್ವಯಂ ಘೋಷಣೆ (ಆನ್‌ಲೈನ್ ಮೂಲಕ) ಸಮೀಕ್ಷೆಗೆ ಮಾಹಿತಿ ಒದಗಿಸಬಹುದಾಗಿದೆ.

ಸಮೀಕ್ಷಾ ಕಾರ್ಯದ ಪೂರ್ವಭಾವಿಯಾಗಿ ರಾಜ್ಯ ಮಟ್ಟದಲ್ಲಿ ನಡೆದ ತರಬೇತಿಗೆ ಚಿತ್ರದುರ್ಗ ಜಿಲ್ಲಾ ಹಂತದಿಂದ 03 ಮಾಸ್ಟರ್ ಟ್ರೈನರ್‌ಗಳನ್ನು ನಿಯೋಜಿಸಲಾಗಿದ್ದು, ಈ ಟ್ರೈನರ್‌ಗಳು 2025ರ ಏಪ್ರಿಲ್ 25ರಂದು ಬೆಂಗಳೂರಿನಲ್ಲಿ ನಡೆದ ತರಬೇತಿಯಲ್ಲಿ ಭಾಗವಹಿಸಿ, ಸಮೀಕ್ಷಾ ಕಾರ್ಯಗಳ ಸಂಪೂರ್ಣ ಮಾಹಿತಿಯನ್ನು ಪಡೆದುಕೊಂಡು 2025ರ ಏಪ್ರಿಲ್ 28ರಂದು ನಡೆದ ಜಿಲ್ಲಾ ಮಟ್ಟದ ತರಬೇತಿ ಕಾರ್ಯದಲ್ಲಿ 06 ತಾಲ್ಲೂಕುಗಳಿಂದ ನಿಯೋಜಿಸಿರುವ ತಾಲ್ಲೂಕು ಮಟ್ಟದ 30 ಮಾಸ್ಟರ್ ಟ್ರೈನರ್‌ಗಳಿಗೆ ತರಬೇತಿಯನ್ನು ನೀಡಲಾಗಿರುತ್ತದೆ.



ಮೇ 02ರಂದು ತಾಲ್ಲೂಕು ಹಂತದಲ್ಲಿ ತಾಲ್ಲೂಕು ಮಟ್ಟದ ಮಾಸ್ಟರ್ ಟ್ರೈನರ್‌ಗಳಿಂದ ಸಮೀಕ್ಷಾ ಕಾರ್ಯವನ್ನು ಕೈಗೊಳ್ಳುವ ಗಣತೀದಾರರಿಗೆ ಮತ್ತು ಮೇಲ್ವಿಚಾರಕರುಗಳಿಗೆ ತಹಶೀಲ್ದಾರ್ ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳನ್ನೊಳಗೊಂಡ ತಾಲ್ಲೂಕು ಸಮನ್ವಯ ಸಮಿತಿಯ ನೇತೃತ್ವದಲ್ಲಿ ತರಬೇತಿಯನ್ನು ಆಯೋಜಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ.

ಪರಿಶಿಷ್ಟ ಜಾತಿ ಒಳ ಮೀಸಲಾತಿಯನ್ನು ಜಾರಿಗೊಳಿಸುವ ಸಂಬಂಧ ಕರ್ನಾಟಕ ಉಚ್ಚನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳಾದ ಹೆಚ್.ಎನ್.ನಾಗಮೋಹನ್ ದಾಸ್ ಅವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಏಕ ಸದಸ್ಯ ಆಯೋಗವು 2025ರ ಮಾರ್ಚ್ 27ರಂದು ಮುಖ್ಯಮಂತ್ರಿಗಳಿಗೆ ಮಧ್ಯಂತರ ವರದಿಯನ್ನು ಸಲ್ಲಿಸಿದ್ದು. ಈ ವರದಿಯಲ್ಲಿ ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿಯಲ್ಲಿರುವ ಉಪಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ಹೊಸದಾಗಿ ಸಮೀಕ್ಷೆ ನಡೆಸಿ ದತ್ತಾಂಶವನ್ನು ಸಂಗ್ರಹಿಸುವ ಸಲುವಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಅವರು ರಾಜ್ಯ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಸಮನ್ವಯ ಸಮಿತಿಗಳನ್ನು ರಚಿಸಿ ಆದೇಶಿಸಿದ್ದಾರೆ.

ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ವೇಳಾಪಟ್ಟಿಯನ್ವಯ ಸಮೀಕ್ಷಾ ಕಾರ್ಯವನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ವಾಸವಾಗಿರುವ ಎಲ್ಲಾ ಪರಿಶಿಷ್ಟ ಜಾತಿ ಜನಾಂಗದವರು ಗಣತೀದಾರರಿಗೆ ಅಗತ್ಯ ಮಾಹಿತಿಯನ್ನು ನೀಡಿ ಸಮೀಕ್ಷಾ ಕಾರ್ಯ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಸಮನ್ವಯ ಸಮಿತಿ ಅಧ್ಯಕ್ಷ ಟಿ.ವೆಂಕಟೇಶ್ ತಿಳಿಸಿದ್ದಾರೆ.

# ಬಸವಣ್ಣನವರ ವರ್ಗರಹಿತ ಸಮಾಜ ಸೃಷ್ಟಿಯಾಗಲು ಬಸವತತ್ವ ಅನುದಾನಿತ ಶರಣರುಗಳೇ ದಾರಿ: ಸಂಸದ

» ಚಿತ್ರದುರ್ಗದ

ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿಶ್ರೀ ಬಸವೇಶ್ವರಜಯಂತಿ 2025 ರ ಅಂಗವಾಗಿ ದಿನಾಂಕ 28.04.2025ರ ಸಂಜೆ 6 ಗಂಟೆಗೆ ಶ್ರೀಮಠದ ಅನುಭವ ಮಂಟಪದಲ್ಲಿಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್.ಜೆ.ಎಂ. ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದ ಡಾ.ಬಸವಕುಮಾರ ಸ್ವಾಮೀಜಿ ಪ್ರಾಸ್ತಾವಿಕ ನುಡಿಗಳಾನ್ನಾಡುತ್ತಾ, ಯಾವುದೇ ಪರಂಪರೆಯನ್ನು ನೈಜವಾಗಿಅರ್ಥೈಸುವ ಪ್ರಕ್ರಿಯೆ ನಮ್ಮದಾಗಬೇಕು.ಪರಮ ಪೂಜ್ಯಡಾ.ಶರಶ್ಚಂದ್ರ ಸ್ವಾಮಿಗಳ ಗುರುಗಳು ಆ ಕೆಲಸವನ್ನು ಮಾಡಿದ್ದಾರೆ. ಡಾ. ಇಮ್ಮಡಿ ಶಿವಬಸವ ಮಹಾಸ್ವಾಮಿಗಳವರು ಒಬ್ಬ ಸಂಶೋಧನಾ ವಿದ್ಯಾರ್ಥಿಯಾಗಿ ಸಿದ್ದಾಂತ ಶಿಖಾಮಣಿ ಎಂಬ ಪುಸ್ತಕವನ್ನು ಬರೆದಿದ್ದಾರೆ.ಅದರ ನೈಜತೆಯನ್ನುಕುರಿತ ನಿಜದ ನಿಲುವು ಎಂಬ ಪುಸ್ತಕವನ್ನು ಬರೆದಿದ್ದಾರೆ. ಆ ಕೃತಿಯು2003ರಲ್ಲಿ ಪ್ರಕಟಗೊಂಡಿದೆ. ಎಂ.ಎಂ. ಕಲಬುರ್ಗಿಯವರೇ ಆ ಕೃತಿಯನ್ನ ಪ್ರತಿಯೊಬ್ಬ ಲಿಂಗಾಯತರುಓದಲೇ ಬೇಕೆಂದು ತಿಳಿಸಿದ್ದರು.ನಾಡಿನ ಸಾಹಿತಿಗಳು ಹಾಗು ಮಠಾಧೀಪತಿಗಳು ಆ ಕೃತಿಯ ಬಗ್ಗೆ ಅತ್ಯಂತ ಮೆಚ್ಚುಗೆಯನ್ನು ವ್ಯಕ್ತಪಡಿಸಿದ್ದಾರೆ ಎಂದು ನುಡಿದರು.



ಬಸವ ಬೆರಗು (ಶರಣರದೃಷ್ಟಿಯಲ್ಲಿ ಬಸವಣ್ಣನವರು) ವಿಷಯದಚಿಂತನ ಗೋಷ್ಠಿಯಲ್ಲಿ ದಿವ್ಯ ಸಾನಿಧ್ಯ ಹಾಗೂ ವಿಷಯಾವಲೋಕ ನಕಾರ್ಯಕ್ರಮದಲ್ಲಿ ಮಾತನಾಡಿದ ಮೈಸೂರು ಶ್ರೀ ಕುಂದೂರು ಮಠದ ಪೂಜ್ಯ ಶ್ರೀ ಡಾ. ಶರಶ್ಚಂದ್ರ ಸ್ವಾಮಿಗಳು, ಮಡಿವಾಳ ಮಾಚಿದೇವರು, ಬಸವಣ್ಣನವರ ನಡೆ–ನುಡಿ, ದೃಷ್ಟಿ, ಮನ, ಅನುಭಾವಗಳನ್ನು ನೆನೆಂಯುವುದೇಪುಣ್ಯಎಂದುಅವರ ವಚನದಲ್ಲಿ ಬಸವಣ್ಣನವರ ಬಗ್ಗೆ ವರ್ಣನೆ ಮಾಡಿದ್ದಾರೆ. ಶರಣರದೃಷ್ಟಿಯಲ್ಲಿ ಬಸವಣ್ಣನನ್ನು ನೋಡಬೇಕಾದರೆ ಅಲ್ಲಮಪ್ರಭುಗಳು ಮರ್ತ್ಯಲೋಕ, ಮಹಾಮನೆ ಹಾಳಾಗಬಾರದೆಂದು ಒಬ್ಬರನ್ನು ಕಳಿಸಿದ್ದೇನ್ನಯ್ಯ ಎಂಬ ವಚನವನ್ನುನೋಡಿದರೆ, ಮೃತ್ರ್ಯು ಲೋಕ ಮತ್ತು ಶಿವಲೋಕಕ್ಕೆ ಬಸವಣ್ಣ ನಿಚ್ಚಣಿಯಾದ. ಅಂದರೆಏಣಿಯಾಗಿರೂಪ ಧರಿಸಿದವರು.ಬಸವಣ್ಣಯಾಕೆ ವಿಭಿನ್ನ, ಸಾಂಸ್ಕೃತಿಕ ನಾಯಕಎಂಬುದನ್ನು ನೋಡಿದರೆ ಬಸವಣ್ಣನವರು ಚಿಂತಿಸಿದ ರೀತಿಅವರುಇಹಲೋಕದ ಬಗ್ಗೆ ಚಿಂತನೆ ಮಾಡಿದವರು. ಇಹದ ಬಗ್ಗೆ ಮಹತ್ವ ನೀಡಿದೆಎಂದು ಬಸವಣ್ಣನವರೇ ಹೇಳುವಂತೆ ಇಲ್ಲಿ ಸಲ್ಲುವವನು, ಅಲ್ಲಿಯೂ ಸಲ್ಲುವವನು. ಅಕ್ಕಮಹಾದೇವಿ ಹೇಳುವಂತೆ ಉಪ್ಪು ನೀರಿನಲ್ಲಿಕರಗುತ್ತದೆ, ಮುತ್ತುಕರಗುವುದಿಲ್ಲ. ಮುತ್ತಿನಂತೆ ಬಸವಣ್ಣಎಂದುತನ್ನ ವಚನದಲ್ಲಿ ವಿವರಿಸಿದ್ದಾರೆ.ಬಸವಣ್ಣನವರ ಸಮಾಜ ಸುಧಾರಣೇಯದೃಷ್ಟಿಕೋನ ಮಹತ್ವವಾದದ್ದು.2000 ವರ್ಷಗಳ ಹಿಂದೆ ಅಶೋಕನ ಶಾಸನದಲ್ಲಿ ಸಮಾಜದ ಬಹುತೇಕಜನರುಧರ್ಮ ಭ್ರಷ್ಟರಾಗಿದ್ದಾರೆ ಎಂಬುದನ್ನು ನೋಡಬಹುದು.ಸಮಾಜವು ಕಾಲಕಾಲಕ್ಕೆ ಬದಲಾಗುತ್ತ ಹೋಗುತ್ತೆ. ಬಸವಣ್ಣನಂತವರು ಹುಟ್ಟಿಸರಿ ಪಡಿಸುತ್ತಾರೆ. ಮತ್ತೆ ಹಾಗೇಯೆಆಗುತದೆ.ಇದು ಸಮಾಜದ ನಿರಂತರ ಪರಿವರ್ತನೆ. ಸಮಾಜ ಸೇವೆ ಮಾಡುವ ಭಾವನೆಆತ್ಮದಿಂದ ಮೂಡಿದರೆ ಮಾತ್ರ ಸಾದ್ಯ.ಚನ್ನ ಬಸವಣ್ಣನವರ ಪ್ರಕಾರಜಂಗಮ ಸಾಧಕ ಬಸವಣ್ಣ ಎಂದಿದ್ದಾರೆ. ಬಸವಣ್ಣನವರು ಇಷ್ಟಲಿಂಗ ಕೊಟ್ಟು ಭಗವಂತನನ್ನು ನಮ್ಮ ಬಳಿ ತಂದವರಾಗಿದ್ದಾರೆ.ಎಲ್ಲಾ ಧರ್ಮಗಳನ್ನು ಪ್ರಚಾರ ಮಾಡಲು ಮಿಷನರಿಗಳನ್ನು ಹುಟ್ಟಿಕೊಂಡವು, ಆದರೆ ಈ ಧರ್ಮವನ್ನು ಪ್ರಚರಿಸಲುಯಾವುದೇ ಮಿಷನರಿಗಳು ಇಲ್ಲ. ಒಡಲಿಲ್ಲದ್ದಂತ ಬಸವಣ್ಣ ಪ್ರಾಣವಿದ್ದಂತ ಬಸವಣ್ಣ ಎಂದುಅಲ್ಲಮ ಪ್ರಭುಗಳು ಹೇಳುತ್ತಿದ್ದಾರೆ. ಬಸವಣ್ಣನವರ ಅನುಯಾಯಿಗಳಾಗಿ ನಾವೆಲ್ಲ ಅವರ ನೀತಿಯಾನುಸರ ಬದುಕಬೇಕು.ಎಂದು ನುಡಿದರು.

ಬೆಂಗಳೂರಿನ ಬಸವ ಸಮಿತಿಅಧ್ಯಕ್ಷರಾದ ಶ್ರೀಅರವಿಂದಜತ್ತಿರವರುಶರಣಸಂಸ್ಕೃತಿಯ ನಿಜಾಚರಣೆಗಳು ಕುರಿತಚಿಂತನ ನುಡಿಗಳನ್ನಾಡುತ್ತಾ, ಶ್ರೀಮಠವು ಶರಣ ಸಂಸ್ಕೃತಿಯೆಂಬ ಅರ್ಥಪೂರ್ಣವಾದ ವೇದಿಕೆಯನ್ನುತಂದಿದೆ.ಇದರಡಿಯಲ್ಲಿ ಅನೇಕ ಶರಣರುತಮ್ಮದೇಆದದಾರಿಯನು ತೋರಿದ್ದಾರೆ.ಮುಂದಿನ ದಿನಮಾನಗಳಲ್ಲಿ ಒಬ್ಬರನ್ನೊಬ್ಬರು ಭೇಟಿಯಾದಾಗ ಶರಣು ಶರಣಾರ್ಥಿ ಎಂಬ ಪದವನ್ನು ಬಳಸಿ ಬಸವಣ್ಣನವರ ತತ್ತ್ವಾದರ್ಶಗಳನ್ನು ಅಳವಡಿಸಿಕೊಳ್ಳಲು ಶ್ರಮಿಸಿ ಎಂದರು. ಅಂದು ಬಿ.ಡಿ.ಜತ್ತಿಯವರುಅಧಿಕಾರ ಸ್ವೀಕರಿಸುವಾಗ ಶರಣ ಸಂಸ್ಕೃತಿಯಂತೆ ನಿಜಾಚರಣೆಯೊಂದಿಗೆ ಆಗಮಿಸಿ ಅಧಿಕಾರ ಸ್ವೀಕರಿಸಿದರು.ವಿಭೂತಿಧಾರಿಯಾಗಿ ಸಂಸ್ಕೃತಿಯನ್ನುಎತ್ತಿ ಹಿಡಿದವರಾಗಿದ್ದಾರೆ. ನಾವುಗಳು ನುಡಿದಂತೆನಡೆಯಬೇಕು.ಅಂಗ ಜೀವಿಯಾಗಿರದೇ ಲಿಂಗದ ಸಾಕ್ಷಿಯಾಗಿ ಬದುಕಬೇಕು.ಲಿಂಗಾಯತಎಂದರೆಆಯತ ಮಾಡುವುದು ಮತ್ತು ಸ್ವೀಕರಿಸುವುದು. ನಾನು ದೇವಾಲಯಗಳನ್ನು ನಂಬುವುದಿಲ್ಲ. ಕಾರಣ ನಾನು ಬಸವತತ್ತ್ವಅನುಯಾಯಿ. ನಮ್ಮ ತತ್ತ್ವಗಳು ಎಲ್ಲಿಯವರೆಗೆಆಚರಣೆಗೆ ಬರುವುದಿಲ್ಲವೋ ಅಲ್ಲಿಯುವರೆಗೆ ಬಸವಣ್ಣನವರು ವಿಶ್ವಗುರುವಾಗಲು ಸಾದ್ಯವಿಲ್ಲ.ಆದ್ದರಿಂದತತ್ತ್ವಸಿದ್ಧಾಂತಗಳನ್ನು ಅಳವಡಿಸಿಕೊಳ್ಳಿ.ಬಸವಣ್ಣನವರ ಬಗ್ಗೆ ಎಂದಿಗೂ ವ್ಯಂಗ್ಯ ಮಾಡದಿರಿ.ಅವರಂತಹ ಮಹಾತ್ಮರನ್ನುನಾವು ಕಾಣುವುದಿಲ್ಲ. 25 ಲಕ್ಷ ವಿದ್ಯಾರ್ಥಿಗಳಿಗೆ ವಚನಗಳ ಮುಖಾಂತರ ವಚನಸಾರವನ್ನು ತಲುಪಿಸಿದ್ದೇನೆ ಎಂದು ತಿಳಿಸಿದರು.

ಚಿತ್ರದುರ್ಗ ಲೋಕಸಭಾ ಸದಸ್ಯರಾದ ಶ್ರೀ.ಗೋವಿಂದಾಕಾರಜೋಳ ಮಾತನಾಡಿ 12 ನೇಯ ಶತಮಾನದಲ್ಲಿ ಆಗಿಹೋದ ವಿಶ್ವಗುರು ಬಸವಣ್ಣ ಮತ್ತು ವಚನಕಾರರು ನಡೆದಂತಹ ದಾರಿಯಲ್ಲಿ ಮುರುಘಾ ಮಠದ ಸ್ವಾಮೀಜಿಗಳು ನಡೆದುಕೊಂಡು ಬಂದಿದ್ದಾರೆ. ಅಕ್ಷರ ಅನ್ನದಾಸೋಹ ಮಾಡುತ್ತ ಬಂದಿದ್ದಾರೆ.ಬಸವಣ್ಣನವರ ವರ್ಗರಹಿತ ಸಮಾಜ ಸೃಷ್ಟಿಯಾಗಲು ಬಸವತತ್ವಅನುದಾನಿತ ಶರಣರುಗಳೇ ದಾರಿ.ಶ್ರೀಮಠವು ಸುಂದರ ಸಮಾಜ ನಿರ್ಮಾಣಕ್ಕೆ 17 ನೇಯ ಶತಮಾನದಿಂದ ಅನೇಕ ವಿದ್ಯಾರ್ಥಿ ನಿಲಯ, ವಿದ್ಯಾಸಂಸ್ಥೆ ಗಳನ್ನು ಸ್ಥಾಪಿಸಿರುವುದರಿಂದ ನಾವೆಲ್ಲ ಬೆಳಕು ಕಾಣುತ್ತಿದ್ದೇವೆಎಂದರು.

ಚಿತ್ರದುರ್ಗ ವಿಧಾನಪರಿಷತ್ ಸದಸ್ಯರಾದ ಶ್ರೀ.ಕೆ.ಎಸ್.ನವೀನ್ ಮಾತನಾಡಿ, ಬಸವಣ್ಣನವರನ್ನು ಸರ್ಕಲ್ ಗಳಲ್ಲಿ ಕೇವಲ ಪ್ರತಿಮೆ ಮತ್ತು ಮನೆಗಳಲ್ಲಿ ಪೂಜಿಸುವುದು ಇಂದಿನ ದಿನಗಳಲ್ಲಿ ನಡೆಯುತ್ತಿದೆ. ಹಿಂದೆಯೂ ಮತ್ತು ಮುಂದೆಯೂ ಪ್ರಸ್ತುತವಾಗಿರುವುದೆಂದರೇ ಬಸವಣ್ಣ.12 ನೇಯ ಶತಮಾನದಲ್ಲಿಅನುಭವ ಮಂಟಪದಮುಖಾಂತರಏಕತೆಯನ್ನುತರುವುದಾಗಿದೆ.ಆದರೆಇಂದು ಪಂಗಡಗಳನ್ನಾಗಿ ವಿಂಗಡಿಸಿಕೊಂಡು ಏಕತೆಯಿಂದದೂರ ವುಳಿದುವುದಾಗಿದೆ. ಇಂದಿನ ದಿನಮಾನಗಳಲ್ಲಿ ಬಸವಣ್ಣನವರಜೀವನ ಮತ್ತು ವಚನ ಸಾರಗಳನ್ನು ಮಕ್ಕಳಿಗೆ ತಿಳಿಸಬೇಕಿದೆ.ಬಸವ ತತ್ತ್ವ ಪಸರಿಸುವಂತೆ ಮಾಡಬೇಕಿದೆ.ಸರ್ವರಲ್ಲೂಏಕತೆಕಾಣುವುದು ಸಮಾನತೆಯಿಂದ ಬಾಳುವುದು ಕಾಯಕ ಶ್ರದ್ದೆಯನ್ನು ಮೂಡುವುದರಿಂದ ಸಮಾಜಕ್ಕೆ ನಮ್ಮಕೊಡುಗೆ ನೀಡಬಹುದಾಗಿದೆಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿಹರಗುರುಚರಮೂತಿಗಳು, ವಿದ್ಯಾಪೀಠದ ವಿವಿಧ ಸಂಸ್ಥೆಯ ಮುಖ್ಯಸ್ಥರುಗಳು, ನೌಕರರು ಹಾಗು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿಜಮುರಾಕಲಾವಿದರಾದಉಮೇಶ್ ಪತ್ತಾರ್ ಪ್ರಾರ್ಥಿಸಿ, ಷಡಾಕ್ಷರಯ್ಯನವರು ಸ್ವಾಗತಿಸಿ, ನವೀನ್ ಮಸ್ಕಲ್ ನಿರೂಪಿಸಿ, ಸಿದ್ದೇಶ್ ಶರಣು ಸಮರ್ಪಣೆ ನಡೆಸಿ ಕೊಟ್ಟರು.

ಶ್ರೀ ಬಸವೇಶ್ವರಜಯಂತಿ 2025ರ ಅಂಗವಾಗಿ ದಿನಾಂಕ 28.04.2025 ರಂದು ನಡೆದ ವಿವಿಧ ಸ್ಪರ್ಧೆಗಳಲ್ಲಿ ಬಹುಮಾನ ಪಡೆದವರು, ವಚನ ಕಂಠಪಾಠ ಸ್ಪರ್ಧೆಯಲ್ಲಿ0 – 16 ವಯೋಮಾನದ ವಿಭಾಗದಲ್ಲಿ ಪ್ರತೀಕ್ಷಾಜಿ.ಟಿ, ಸ್ಫೂರ್ತಿ, ಯುಮುನಾದೇವಿ ಇವರುಗಳು ಕ್ರಮವಾಗಿ ಪ್ರಥಮ, ದ್ವಿತೀಯ ಹಾಗು ತೃತೀಯ ಸ್ಥಾನ ಪಡೆದರು. 17 ರ ವಯೋಮಾನ ಮೇಲ್ಪಟ್ಟ ವಿಭಾಗದಲ್ಲಿಗೀತಾರುದ್ರೇಶ್, ತೃಪ್ತಿ, ಶಿಲ್ಪ ಎಂ.ಆರ್ಕ್ರಮವಾಗಿ ಪ್ರಥಮ, ದ್ವಿತೀಯ ಹಾಗು ತೃತೀಯ ಸ್ಥಾನ ಪಡೆದರು. ಬಸವಾದಿ ಶರಣರಚಿತ್ರ ಬಿಡಿಸುವಸ್ಪರ್ಧೆಯಲ್ಲಿಸುಷ್ಮಾರಂಗಸ್ವಾಮಿ, ವೀರೇಂದ್ರಅರ್. ನಮಿತಾ ಶ್ರೀ ಜೆ.ಎನ್ಇವರುಗಳು ಕ್ರಮವಾಗಿ ಪ್ರಥಮ, ದ್ವಿತೀಯ ಹಾಗು ತೃತೀಯ ಸ್ಥಾನ ಪಡೆದರು.ರಂಗೋಲಿ ಸ್ಪರ್ಧೆಯಲ್ಲಿ ಪ್ರೀತಿಆರ್.ಕೆ, ಸೌಮ್ಯ ವಿನಯ್ ಪ್ರಸಾದ್, ಮಂಜುಳ ಹಿರೇಮಠ್ಕ್ರಮವಾಗಿ ಪ್ರಥಮ, ದ್ವಿತೀಯ ಹಾಗು ತೃತೀಯ ಸ್ಥಾನ ಪಡೆದರು. ಶಿವಶರಣರ ವೇಷಭೂಷಣ ಸ್ಪರ್ಧೆಯ0 – 16 ವಯೋಮಾನದ ವಿಭಾಗದಲ್ಲಿ ಸೃಜನಾಡಿ.ಜೆ (ಅಕ್ಕಮಹಾದೇವಿ) ಚೇತನಾ ಪ್ರಿಯ (ಅಲ್ಲಮಪ್ರಭು) ನಮಿತಾ ಶ್ರೀ ಜೆ.ಎಲ್ (ಅಕ್ಕಮಹಾದೇವಿ) ಇವರುಗಳು ಕ್ರಮವಾಗಿ ಪ್ರಥಮ, ದ್ವಿತೀಯ ಹಾಗು ತೃತೀಯ ಸ್ಥಾನ ಪಡೆದರು. 17 ರ ವಯೋಮಾನ ಮೇಲ್ಪಟ್ಟ ವಿಭಾಗದಲ್ಲಿಜಯದೇವ (ಬಸವಣ್ಣ), ತನುಜಾ ಕೆ.ಪಿ (ಅಕ್ಕಮಹಾದೇವಿ), ಗೀತಾ.ಬಿ.ಜಿ (ಅಂಬಿಗರಚೌಡಯ್ಯ) ಕ್ರಮವಾಗಿ ಪ್ರಥಮ, ದ್ವಿತೀಯ ಹಾಗು ತೃತೀಯ ಸ್ಥಾನ ಪಡೆದರು. ಸಿದ್ದೇಶ್.ಡಿ.ಎಸ್ (ಬಸವಣ್ಣ) ಸಮಾಧಾನಕರ ಬಹುಮಾನ ಪಡೆದಿರುತ್ತಾರೆ.

## ಫಾಸ್ಟ್ ನ್ಯೂಸ್

### ಮಹಿಳೆ ಕಾಣೆ: ಪತ್ತೆ ನೆರವಿಗೆ ಮನವಿ

» ಚಿತ್ರದುರ್ಗ

ಮಧು ಮಹಾಲಕ್ಷ್ಮಿ (32), ಏಪ್ರಿಲ್ 21 ರಂದು ಕಾಣೆಯಾದ ಕುರಿತು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುತ್ತದೆ. 5 ಅಡಿ ಎತ್ತರ, ದುಂಡು ಮುಖ, ಸಾಧಾರಣ ಮೈಕಟ್ಟು, ಗೋಧಿ ಮೈ ಬಣ್ಣ ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾಳೆ, ಮನೆಯಿಂದ ಹೋಗುವಾಗ ಹಳದಿ ಬಣ್ಣದ ನೈಟಿ ಧರಿಸಿರುತ್ತಾರೆ. ಕಾಣೆಯಾದ ಸುಳಿವು ಸಿಕ್ಕಲ್ಲಿ ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08191–277277, 9480803165, ಹೊಳಲ್ಕೆರೆ ವೃತ್ತ ನಿರೀಕ್ಷಕರವರ ಕಛೇರಿ ದೂರವಾಣಿ ಸಂಖ್ಯೆ 08191–275376, 9480803135, ಚಿತ್ರದುರ್ಗ ಪೊಲೀಸ್ ಉಪಾಧೀಕ್ಷಕರವರ ಕಛೇರಿ ದೂರವಾಣಿ ಸಂಖ್ಯೆ 08194–222430, ಜಿಲ್ಲಾ ಕಂಟ್ರೋಲ್ ರೂಂ 08194–222782, 9480803100, ಕರೆ ಮಾಡುವಂತೆ ಪ್ರಕಟಣೆ ತಿಳಿಸಿದೆ.

### 30 ರಂದು ವಿರಕ್ತಮಠದಲ್ಲಿ 113ನೇ ವರ್ಷದ ಬಸವ ಜಯಂತ್ಯೋತ್ಸವ

» ದಾವಣಗೆರೆ

ವಿಶ್ವದಲ್ಲಿಯೇ ಮೊಟ್ಟ ಮೊದಲ ಬಾಡಿಗೆ 1913 ರಲ್ಲಿ ವಿಶ್ವಗುರು ಬಸವಣ್ಣನವರ ಜಯಂತಿಯನ್ನು ಆಚರಿಸಿದ ಐತಿಹಾಸಿಕ ಸ್ಥಳವಾದ ನಗರದ ಶ್ರೀ ವಿರಕ್ತಮಠದ ಬಸವಕೇಂದ್ರದ ಆವರಣದಲ್ಲಿ ವಿರಕ್ತಮಠದಲ್ಲಿ ಬಸವ ಜಯಂತಿಯನ್ನು ಪ್ರಾರಂಭಿಸಿದ ಪೂಜ್ಯ ಶ್ರೀ ಮೃತ್ಯುಂಜಯ ಅಪ್ಪಗಳು ಮತ್ತು ಪೂಜ್ಯ ಶ್ರೀ ಹರ್ಡೇಕರ್ ಮಂಜಪ್ಪನವರ ಸ್ಮರಣೋತ್ಸವ ಹಾಗೂ 113ನೇ ಬಸವ ಜಯಂತ್ಯೋತ್ಸವ ಸಮಾರಂಭವನ್ನು 30 ರ ಬುಧವಾರ ಹಮ್ಮಿಕೊಳ್ಳಲಾಗಿದೆ ಎಂದು ಪಂಚಮಸಾಲಿ ಸಮಾಜದ ರಾಜ್ಯ ಯುವ ಘಟಕದ ಉಪಾಧ್ಯಕ್ಷ ಎನ್.ಬಕ್ಕೇಶ್ ತಿಳಿಸಿದ್ದಾರೆ. ಅಂದು ಬೆಳಿಗ್ಗೆ 7.30 ಕ್ಕೆ ಶ್ರೀ ವಿರಕ್ತಮಠ, ಲಿಂಗಾಯಿತ ತರುಣ ಸಂಘದೊಂದಿಗೆ ಡಾ. ಬಸವ ಪ್ರಭು ಸ್ವಾಮಿಗಳ ನೇತೃತ್ವದಲ್ಲಿ ಗುರು ಬಸವಣ್ಣನವರ ಮೂರ್ತಿಯೊಂದಿಗೆ ಬಸವಾದಿ ಶರಣರ ವಚನ ಗ್ರಂಥ ಮೆರವಣಿಗೆಯು ನಗರದ ಪ್ರಮುಖ ಬೀದಿಗಳಲ್ಲಿ ನಡೆಯಲಿದ್ದು, ಬೆಳಿಗ್ಗೆ 9.30ಕ್ಕೆ ಶ್ರೀ ಗುರು ಬಸವಣ್ಣನವರ ತೊಟ್ಟಿಲು ಕಾರ್ಯಕ್ರಮದಲ್ಲಿ ಸರ್ವ ಸಮುದಾಯದ ನವಜಾತ ಶಿಶುಗಳಿಗೆ ನಾಮಕರಣ ಮಾಡಲಾಗುವುದು ಎಂದು ಅವರು ತಿಳಿಸಿದ್ದಾರೆ. ಬೆಳಿಗ್ಗೆ 10 ಗಂಟೆಗೆ ನಡೆಯುವ ವೇದಿಕೆ ಕಾರ್ಯಕ್ರಮದ ನೇತೃತ್ವವನ್ನು ಶ್ರೀ ಬಸವಪ್ರಭು ಸ್ವಾಮೀಜಿ ವಹಿಸುವರು, ಲಿಂಗಾಯಿತ ತರುಣ ಸಂಘದ ಕಣಕುಪ್ಪಿ ಮುರುಗೇಶಪ್ಪ ರವರ ಸಂಚಾಲಕತ್ವದಲ್ಲಿ ಬಸವ ಪ್ರಭಾತ್‌ಪೇರಿ ಸಮಿತಿ ಅಧ್ಯಕ್ಷರಾದ ಬಕ್ಕೇಶ್ ಎನ್., ಕಾರ್ಯದರ್ಶಿ ಜಿ. ಮಹಾಂತೇಶ್ ಉಪಸ್ಥಿತರಿರುವರು. ಜಾನಪದ ಸಂಗಮ ಶ್ರೀ ಗಂಜಿಕಟ್ಟೆ ಕೃಷ್ಣಮೂರ್ತಿ ಅವರಿಂದ ವಚನ ಸಂಗೀತ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದ್ದಾರೆ. ದಾವಣಗೆರೆ ವಿರಕ್ತಮಠದಿಂದ 1917ರಲ್ಲಿ ಶ್ರೀ ಮೃತ್ಯುಂಜಯ ಅಪ್ಪಗಳು, ಹರ್ಡೇಕರ್ ಮಂಜಪ್ಪನವರು ಬಸವಪ್ರಭಾತ್ ಪೇರಿಯನ್ನು ಪ್ರಾರಂಭಿಸಿದರು. ನಂತರ ಚಿತ್ರದುರ್ಗ ಜಗದ್ಗುರುಗಳ ಅಪ್ಪಣೆಯಂತೆ ಕಣಕುಪ್ಪಿ ಕೊಟ್ರಬಸಪ್ಪ, ಗುರುಪಾದಪ್ಪನವರು ಯಶಸ್ವಿಯಾಗಿ ನಡೆಸಿಕೊಂಡು ಬಂದಿರುವ ಪ್ರಭಾತ್‌ಪೇರಿ ಕಾರ್ಯಕ್ರಮವನ್ನು ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಶ್ರೀಮತಿ ವಾಣಿ ಬಕ್ಕೇಶ್ ಅವರು ಉದ್ಘಾಟಿಸಿದ್ದು, ಇದೇ ಸಂದರ್ಭದಲ್ಲಿ ಈ ಪ್ರಭಾತ್‌ಪೇರಿ ಕಾರ್ಯಕ್ರಮದ ಸಮಾರೋಪ ಸಮಾರಂಭ ನೆರವೇರಲಿದೆ.

### ಹೈನುಗಾರಿಕೆ ತರಬೇತಿ

» ಚಿತ್ರದುರ್ಗ

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ ನಗರದ ಪ್ರಧಾನ ಅಂಚೆ ಕಚೇರಿ ಪಕ್ಕದ ಪಶುಆಸ್ಪತ್ರೆ ಆವರಣದಲ್ಲಿ ಮೇ 5 ಮತ್ತು 6 ರಂದು ರೈತರಿಗೆ ಆಧುನಿಕ ಹೈನುಗಾರಿಕೆ ತರಬೇತಿ ಶಿಬಿರ ಆಯೋಜಿಸಲಾಗಿದೆ. 25 ಜನರಿಗೆ ತರಬೇತಿ ನಿಗದಿ ಪಡಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 3 ಪಾಸ್ ಪೋರ್ಟ್ ಸೈಜ್ ಪೋಟೋ, ಬ್ಯಾಂಕ್ ಪಾಸ್ ಬುಕ್ ಪ್ರತಿ, ಪರಿಶಿಷ್ಟ ಜಾತಿ, ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರ ಸಲ್ಲಿಸಬೇಕು. ರೈತರು ವಾಟ್ಸ್ ಮೂಲಕವೂ ನೊಂದಣಿ ಮಾಡಿಕೊಳ್ಳಬಹುದು. ನೊಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ 9482943111 ಮತ್ತು 9886002248 ಗೆ ಸಂಪರ್ಕಿಸುವಂತೆ ಮುಖ್ಯ ಪಶುವೈದ್ಯಾಧಿಕಾರಿ ತಿಳಿಸಿದ್ದಾರೆ.

### ಬಸವ ಜಯಂತಿ

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ ಏಪ್ರಿಲ್ 30 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಬಸವ ಜಯಂತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

### ಶಂಕರಚಾರ್ಯ ಜಯಂತಿ

» ದಾವಣಗೆರೆ


ಜಿಲ್ಲಾಡಳಿತ ವತಿಯಿಂದ ಮೇ.2 ರಂದು ಬೆಳಿಗ್ಗೆ 10.30ಕ್ಕೆಜಿಲ್ಲಾಡಳಿತಭವನದಲ್ಲಿಶ್ರೀಶಂಕರಚಾರ್ಯ ಜಯಂತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

# ಮೆ.2ರಂದು ಶ್ರೀ ಶಂಕರಾಚಾರ್ಯ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಶ್ರೀ ಶಂಕರಾಚಾರ್ಯ ಜಯಂತಿ ಆಚರಣೆ ಸಮಾರಂಭ ಮೇ 02ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ. ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ. ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ.



ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ, ವಿಧಾನಪರಿಷತ್ ಸದಸ್ಯರುಗಳಾದ ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಡಿ.ಟಿ.ಶ್ರೀನಿವಾಸ್ ಭಾಗವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ. ಬಿ. ಯೋಗೇಶ್ ಬಾಬು, ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಬ್ರಾಹ್ಮಣ ಸಂಘ ಜಿಲ್ಲಾ ಅಧ್ಯಕ್ಷ ಪಿ.ಎಸ್.ಮಂಜುನಾಥ, ಕಾರ್ಯದರ್ಶಿ ಡಿ.ಜಿ.ಪ್ರಾಣೇಶ್ ರಾವ್ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಚುನಾಯಿತ ನಗರಸಭಾ ಸದಸ್ಯರು ಹಾಗೂ ಜಿಲ್ಲೆಯ ಬ್ರಾಹ್ಮಣ ಸಂಘದ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು. ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನ ಅರ್ಚಕರು ಹಾಗೂ ಜಿಲ್ಲಾ ಬ್ರಾಹ್ಮಣ ಸಂಘ ನಿರ್ದೇಶಕ ಎಸ್.ಸತೀಶ್ ಉಪನ್ಯಾಸ ನೀಡುವರು. ಮೀನಾಕ್ಷಿ ಭಟ್ ಮತ್ತು ತಂಡದವರು ಗೀತಗಾಯನ ನಡೆಸಿಕೊಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಿ.ಎಂ. ಗುರುನಾಥ ತಿಳಿಸಿದ್ದಾರೆ.

# ಪತ್ರಕರ್ತ ಟಿ.ತಿಪ್ಪೇಸ್ವಾಮಿ ಸಂಪಿಗೆ ಅವರಿಗೆ 'ಬಸವ ಸೇವಾರತ್ನ' ಪ್ರಶಸ್ತಿ



**ಚಿತ್ರದುರ್ಗ:** ಯಶಸ್ವಿ ಪತ್ರಿಕೋದ್ಯಮ ಹಾಗೂ ಅಲಕ್ಷಿತ ಸಣ್ಣ ಸಮುದಾಯಗಳ ಪರವಾಗಿ ದುಡಿದ ಅನುಪಮ ಸೇವೆಗಾಗಿ ಪ್ರಸ್ತುತ ಸಾಲಿನ ಬಸವ ಸೇವಾರತ್ನ ಪ್ರಶಸ್ತಿಯನ್ನು ಇಲ್ಲಿನ ಬಸವ ಮಂಟಪದಿಂದ ಪ್ರಕಟಿಸಲಾಗಿದೆ. ಏ.30ರಂದು ರಂಗಯ್ಯನಬಾಗಿಲು ಬಳಿ ಇರುವ ಬಸವ ಮಂಟಪದಲ್ಲಿ ಜರುಗುವ ಬಸವ ಜಯಂತಿ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಗಡಿನಾಡು ಚಳ್ಳಕೆರೆ ತಾಲ್ಲೂಕಿನಲ್ಲಿ ಕಳೆದ 29 ವರ್ಷಗಳಿಂದಲೂ ನಿರಂತರವಾಗಿ 'ಕನ್ನಡ ಸಂಪಿಗೆ' ಪತ್ರಿಕೆಯನ್ನು ಯಶಸ್ವಿಯಾಗಿ ಪ್ರಕಟಣೆ ಮಾಡುತ್ತಾ ಬರುತ್ತಿದ್ದು, ಪತ್ರಿಕೋದ್ಯಮ ಸೇವೆ ಹಾಗೂ ಅಲಕ್ಷಿತ ಸಣ್ಣ ಸಮುದಾಯಗಳ ಪರವಾಗಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿರುವ ಟಿ.ತಿಪ್ಪೇಸ್ವಾಮಿ ಸಂಪಿಗೆ ಅವರ ಸೇವೆಯನ್ನು ಗುರುತಿಸಿ, ಈ ಪ್ರಶಸ್ತಿ ಪ್ರಕಟಿಸಲಾಗಿದೆ ಎಂದು ಬಸವಮಂಟಪ ಮೂಲಗಳು ತಿಳಿಸಿವೆ.

## ಪ್ರಮುಖ ಸುದ್ದಿ

# ವಿದ್ಯಾರ್ಥಿಗಳ ಸಾರ್ಥಕತೆಯ ಬದುಕನ್ನು ರೂಪಿಸುವವನೇ ಶಿಕ್ಷಕ; ಶಿಕ್ಷಕರು ಜವಾಬ್ದಾರಿ ಅರಿತು ಕಾರ್ಯನಿರ್ವಹಿಸಬೇಕು: ಬಿಇಓ

» ಚಳ್ಳಕೆರೆ

ವಿದ್ಯಾರ್ಥಿಯ ಅಭಿರುಚಿಗೆ ತಕ್ಕಂತೆ ಮಾರ್ಗದರ್ಶನ ನೀಡಿ ವಿದ್ಯಾರ್ಥಿಯ ಬೆಳವಣಿಗೆಗೆ ಶ್ರಮಿಸಬೇಕು ಇಂತಹ ಶಿಕ್ಷಕರನ್ನು ಯಾರೂ ಮರೆಯಲು ಸಾಧ್ಯವಿಲ್ಲ. ತಾಲ್ಲೂಕಿನ ಸೋಮಗುದ್ದು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಹಶಿಕ್ಷಕರಾಗಿ ಕಾರ್ಯನಿರ್ವಹಿಸಿ ನಿವೃತ್ತರಾದ ಎಂ.ರುದ್ರಮುನಿ ಸಹ ಶಿಕ್ಷಣ ಇಲಾಖೆಯ ಹೆಮ್ಮೆಯ ಶಿಕ್ಷಕ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ಮಂಗಳವಾರ ತಮ್ಮ ಕಚೇರಿ ಆವರಣದಲ್ಲಿ ಸೇವೆಯಿಂದ ನಿವೃತ್ತರಾದ ಎಂ.ರುದ್ರಮುನಿಯವರಿಗೆ ಬೀಳ್ಕೊಡಿಗೆ ಸಮಾರಂಭದಲ್ಲಿ ಮಾತನಾಡಿದರು. ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುವ ಶಿಕ್ಷಣಾಧಿಕಾರಿಗಳೂಸೇರಿದಂತೆಪ್ರತಿಯೊಬ್ಬ ಶಿಕ್ಷಕನಿಗೂ ಮಹತ್ತರವಾದ ಜವಾಬ್ದಾರಿ ಇರುತ್ತದೆ. ಶಿಕ್ಷಕ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಬೇಕಾಗುತ್ತದೆ.



ವಿದ್ಯಾರ್ಥಿಗಳ ಶೈಕ್ಷಣಿಕ ಅವೃದ್ಧಿಗೆ ಒತ್ತು ನೀಡಬೇಕಾಗುತ್ತದೆ, ಶಾಲೆಗೆ ರಜೆ ಹಿನ್ನೆಲೆಯಲ್ಲಿಕಚೇರಿಯಲ್ಲೇ ಶಿಕ್ಷಕನಿಗೆಶಾಲು ಹೊದಿಸಿ ಗೌರವಿಸಿದರು. ಸೇವೆಯಿಂದ ನಿವೃತ್ತ ಹೊಂದುತ್ತಿರುವ ಎಂ.ರುದ್ರಮುನಿ ಬಹುಮುಖ ಪ್ರತಿಭೆ ಎಂದರು. ಅಭಿನಂದನೆ ಸ್ವೀಕರಿಸಿ ಮಾತನಾಡಿದ ನಿರ್ಗಮನ ಸಹ ಶಿಕ್ಷಕ ಎಂ.ರುದ್ರಮುನಿ ಹೊಳೆನರಸಿಪುರದ ಕುರಿಕಾವಲಹಟ್ಟಿಯಿಂದ ವೃತ್ತಿ ಪ್ರಾರಂಭಿಸಿ ಸುಮಾರು 36 ವರ್ಷಗಳ ಕಾಲ ಚಿತ್ರದುರ್ಗ ಜಿಲ್ಲೆಯ ವಿವಿಧ ಭಾಗಗಳಲ್ಲಿ ಕಾರ್ಯನಿರ್ವಹಿಸಿದ್ದೇನೆ. 2023–24ನೇ ಸಾಲಿನಲ್ಲಿ ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪಡೆದೆ, ವಿಶೇಷವಾಗಿ ಚಳ್ಳಕೆರೆ ತಾಲ್ಲೂಕಿನಲ್ಲಿ ಹೆಚ್ಚು ವರ್ಷ ಕಾರ್ಯನಿರ್ವಹಿಸಿದ್ದೇನೆ. ನಗರ ಉತ್ತರ ವಿಭಾಗದ ಸಿಆರ್‌ಪಿಯಾಗಿಯೂ ಕಾರ್ಯನಿರ್ವಹಿಸಿದ್ದೇನೆ. ಎಲ್ಲಾ ಹಂತದಲ್ಲೂ ಮಾರ್ಗದರ್ಶನ ಮಾಡಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಶಾಲೆಯ ಎಲ್ಲಾ ಶಿಕ್ಷಕರಿಗೂ ಅಭಿನಂದಿಸುವುದಾಗಿ ತಿಳಿಸಿದರು. ಪ್ರಾಥಮಿಕ ಶಾಲಾ ಶಿಕ್ಷಕದ ಸಂಘದ ಪ್ರಧಾನ ಕಾರ್ಯದರ್ಶಿ ಹನುಮಂತರಾಯಪ್ಪ, ಖಜಾಂಚಿ ರಂಗನಾಥ, ನಿರ್ದೇಶಕರಾದ ಕೆ.ಎಸ್.ಶ್ರೀಕಾಂತ್, ಕೆಂಚವೀರನಹಳ್ಳಿಮಲ್ಲೇಶ್, ಈರಣ್ಣ, ಎಂ.ಎಚ್.ರಂಗಸ್ವಾಮಿ, ಎಚ್.ನಾಗರಾಜು, ಜಾಕೀರ್, ಉಮೇಶ್, ಎಂ.ಎನ್. ಮೃತ್ಯುಂಜಯ, ನಾಗರಾಜು, ಮುಖ್ಯ ಶಿಕ್ಷಕಿ ರಂಗಮ್ಮ ಮುಂತಾದವರು ಉಪಸ್ಥಿತರಿದ್ದರು.

ಫಾಸ್ಟ್ ನ್ಯೂಸ್

## ಚನ್ನಗಿರಿ ಜನಸೇವಾ ವಿವಿದೋದ್ದೇಶ, ಸರ್ವೇಶ್ವರ ಸಹಕಾರ ನಿಯಮಿತ, ಸಮಾಪನೆಗೆ ಕ್ರಮ

» ದಾವಣಗೆರೆ

ಚನ್ನಗಿರಿ ಜನಸೇವಾ ವಿವಿದೋದ್ದೇಶ ಸೌಹಾರ್ದ ಸಹಕಾರಿ ನಿ., ಚನ್ನಗಿರಿ ಮತ್ತು ಸರ್ವೇಶ್ವರ ಸೌಹಾರ್ದ ಸಹಕಾರಿ ನಿ, ದಾವಣಗೆರೆ. ಇವರು ಉದ್ದೇಶಿತ ಕಾರ್ಯಚಟುವಟಿಕೆಗಳನ್ನು ನಿರ್ವಹಿಸದೇ ಸ್ಥಗಿತಗೊಂಡ ಕಾರಣ ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ, ಬೆಂಗಳೂರು ಇವರು ಈ ಸೌಹಾರ್ದ ಸಹಕಾರಿ ಸಂಘಗಳನ್ನು ಸಮಾಪನೆಗೊಳಿಸಲು ಶಿಫಾರಸ್ಸು ಮಾಡಿರುತ್ತಾರೆ. ಆದ್ದರಿಂದ ಈ ಸೌಹಾರ್ದ ಸಹಕಾರಿ ಸಂಘಗಳನ್ನು ಕರ್ನಾಟಕ ಸೌಹಾರ್ದ ಸಹಕಾರಿ ಸಂಘಗಳ ಅಧಿನಿಯಮನ್ವಯ ಏಕೆ ಸಮಾಪನೆಗೊಳಿಸಬಾರದು ಎಂಬುವುದಕ್ಕೆ 7 ದಿನಗಳೊಳಗಾಗಿ ಸಂಘಗಳ ಕಾರ್ಯದರ್ಶಿಯವರಿಂದ, ಸದಸ್ಯರಿಂದ ಅಥವಾ ಯಾರಿಂದಲಾದರೂ ಆಕ್ಷೇಪಣೆಗಳಿದ್ದಲ್ಲಿ ಸೂಕ್ತ ದಾಖಲೆಗಳೊಂದಿಗೆ ಈ ಕಚೇರಿಗೆ ಸಲ್ಲಿಸಲು, ಇಲ್ಲವಾದಲ್ಲಿ ಈ ಸೌಹಾರ್ದ ಸಹಕಾರಿ ಸಂಘಗಳನ್ನು ನಿಯಮಾನುಸಾರ ಸಮಾಪನೆಗೆ ಕ್ರಮವಹಿಸಲಾಗುವುದೆಂದು ಸಹಕಾರ ಸಂಘಗಳ ಸಹಾಯಕ ನಿಬಂಧಕರು ತಿಳಿಸಿದ್ದಾರೆ.

## ಹೈನುಗಾರಿಕೆ, ಕೋಳಿ ಸಾಕಾಣಿಕೆ ತರಬೇತಿ

» ದಾವಣಗೆರೆ

ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಮೇ.2 ಮತ್ತು 3 ರಂದು ಆಧುನಿಕ ಹೈನುಗಾರಿಕೆ ತರಬೇತಿ ಹಾಗೂ ಮೇ.5 ಮತ್ತು 6 ರಂದು ಕೋಳಿ ಸಾಕಾಣಿಕೆ ತರಬೇತಿಯನ್ನು ಆಯೋಜಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಯು ದಾವಣಗೆರೆ ಜಿಲ್ಲೆಯ ರೈತರಿಗೆ ಮಾತ್ರ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192–233787 ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಪಶುವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

## ವಿದ್ಯಾಭ್ಯಾಸ ಸಾಲಕ್ಕಾಗಿ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ಕರ್ನಾಟಕ ಪ್ರಾಧಿಕಾರದಿಂದ ಆಯ್ಕೆಯಾಗುವ ಸಿಇಟಿ, ನೀಟ್ ವಿದ್ಯಾರ್ಥಿಗಳಿಗೆ ಅರಿವು ಸಾಲ ಯೋಜನೆಯಡಿಯಲ್ಲಿ ವಿದ್ಯಾಭ್ಯಾಸ ಸಾಲಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ.23 ಕೊನೆಯ ದಿನವಾಗಿರುತ್ತದೆ. ನಿಗಮದ ವೆಬ್‌ಸೈಟ್ kmdconline.karnataka.gov.in ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಚೇರಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಕುರುಬರ ಹಾಸ್ಟೆಲ್ ಕಟ್ಟಡ ರಸ್ತೆ ಜಯದೇವ ಸರ್ಕಲ್ ಹತ್ತಿರ ದಾವಣಗೆರೆ ದೂ.ಸಂ:08192–232349 ನ್ನು ಸಂಪರ್ಕಿಸಲು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

## ಖೇಲೋ ಇಂಡಿಯಾ ಉತ್ಕೃಷ್ಟತಾ ಕೇಂದ್ರಕ್ಕೆ ಆಯ್ಕೆ ಪ್ರಕ್ರಿಯೆ

» ದಾವಣಗೆರೆ

ಖೇಲೋ ಇಂಡಿಯಾ ರಾಜ್ಯ ಉತ್ಕೃಷ್ಟತಾ ಕೇಂದ್ರ, ವಿದ್ಯಾನಗರ ಬೆಂಗಳೂರು ಇಲ್ಲಿನ ತರಬೇತಿ ಕೇಂದ್ರಕ್ಕೆ ಅಥ್ಲೆಟಿಕ್ಸ್ ಕ್ರೀಡೆಯಲ್ಲಿ ಪ್ರತಿಭಾನ್ವಿತರಾಗಿರುವ ಹಾಗೂ ಪ್ರತಿಭೆಗಳನ್ನು ಆಯ್ಕೆ ಮಾಡುವ ಸಲುವಾಗಿ ಜಯಪ್ರಕಾಶ್ ನಾರಾಯಣ ರಾಷ್ಟ್ರೀಯ ಯುವ ತರಬೇತಿ ಕೇಂದ್ರ ಕ್ರೀಡಾ ಶಾಲೆ, ವಿದ್ಯಾನಗರ, ಬೆಂಗಳೂರು ಕೇಂದ್ರದಲ್ಲಿ ಮೇ.5 ಮತ್ತು 6 ರಂದು ಆಯ್ಕೆ ಪ್ರಕ್ರಿಯೆಯನ್ನು ಏರ್ಪಡಿಸಲಾಗಿದೆ. ಆಸಕ್ತ ಅರ್ಹ ಕ್ರೀಡಾಪಟುಗಳು ಆಯ್ಕೆಯಲ್ಲಿ ಭಾಗವಹಿಸಬಹುದು ಎಂದು ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಕ್ರಮಕ್ಕೆ ಸೂಚನೆ

» ದಾವಣಗೆರೆ

ಜಿಲ್ಲೆಯ ಯಾವ ಭಾಗದಲ್ಲಿಯೂ ಬಾಲ್ಯ ವಿವಾಹಗಳು ನಡೆಯದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸೂಚಿಸಿದ್ದಾರೆ. ಏ.30ರಂದು ಅಕ್ಷಯ ತೃತೀಯ ದಿನವಾಗಿದ್ದು, ಜಿಲ್ಲೆಯಲ್ಲಿ ಸಾಮೂಹಿಕ ಹಾಗೂ ವೈಯಕ್ತಿಕ ವಿವಾಹಗಳು ಹೆಚ್ಚಾಗಿ ಆಯೋಜನೆಯಾಗುವ ಸಂಭವವಿದೆ. ಅಂತಹ ಸಂದರ್ಭಗಳಲ್ಲಿ ಅಪ್ರಾಪ್ತ ವಯಸ್ಸಿನವರ ವಿವಾಹಗಳು ಜರುಗುವ ಸಾಧ್ಯತೆ ಅಧಿಕವಾಗಿವೆ. ಹೀಗಾಗಿ ಬಾಲ್ಯ ವಿವಾಹ ನಿಷೇಧ ಕಾಯ್ದೆ–2006 ಮತ್ತು ಕರ್ನಾಟಕ ತಿದ್ದುಪಡಿ ಕಾಯ್ದೆ –2016ರ ಸೆಕ್ಷನ್ –13(4) ರಂತೆ ವಿವಾಹಗಳನ್ನು ತಡೆಗಟ್ಟುವ ಅಧಿಕಾರವಿದೆ. ಇದನ್ನು ಅಧಿಕಾರಿಗಳು ಬಳಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ.

### ಜಿಲ್ಲಾಮಟ್ಟದ ಲಸಿಕಾ ಕಾರ್ಯಪಡೆ ಸಭೆಯಲ್ಲಿ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ಸೂಚನೆ

# ಲಸಿಕೆಯಿಂದ ಮಕ್ಕಳು ವಂಚಿತರಾಗದಂತೆ ಎಚ್ಚರ

» ಚಿತ್ರದುರ್ಗ



ಜಿಲ್ಲೆಯಲ್ಲಿ ಮಕ್ಕಳು ಲಸಿಕೆಯಿಂದ ವಂಚಿತರಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಜಿಲ್ಲಾಮಟ್ಟದ ಲಸಿಕಾ ಕಾರ್ಯಪಡೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾರಕ ಕಾಯಿಲೆಗಳಿಂದ ದೂರವಿಟ್ಟು, ಆರೋಗ್ಯಯುತ ಮಕ್ಕಳಿಗಾಗಿ ಬಿಸಿಜಿ, ಹೆಪಟೈಟಿಸ್ ಬಿ, ಪೆಂಟಾ ಸೇರಿದಂತೆ ವಿವಿಧ ಲಸಿಕೆಗಳನ್ನು ಮಕ್ಕಳಿಗೆ ನೀಡಲಾಗುತ್ತಿದ್ದು, ಸಾರ್ವತ್ರಿಕ ಲಸಿಕಾ ಯೋಜನೆಯಲ್ಲಿ ಶೇ.100ರಷ್ಟು ಗುರಿ ಸಾಧನೆ ಮಾಡಬೇಕು. ಯಾವುದೇ ಕಾರಣಕ್ಕೂ ಲಸಿಕೆಯಿಂದ ಮಕ್ಕಳು ವಂಚಿತರಾಗದಂತೆ ಅಗತ್ಯ ಕ್ರಮವಹಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. ವಿವಿಧ ಇಲಾಖೆಗಳ ಸಹಕಾರ ಮತ್ತು ಸಮನ್ವಯದೊಂದಿಗೆ ಕಾರ್ಯಕ್ರಮ ನಿರ್ವಹಿಸುವ ಮೂಲಕ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಸಲಹೆ ನೀಡಿದರು. ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್ ಮಾತನಾಡಿ, ವಿಶ್ವ ಲಸಿಕಾ ಸಪ್ತಾಹ ಪ್ರತಿ ವರ್ಷದಂತೆ ಈಗಾಗಲೇ ಏಪ್ರಿಲ್ 24 ರಿಂದ ಪ್ರಾರಂಭವಾಗಿದ್ದು, ಏಪ್ರಿಲ್ 30 ರವರೆಗೆ ನಡೆಸುವ ವಿಶೇಷ ಲಸಿಕಾ ಅಭಿಯಾನವಾಗಿರುತ್ತದೆ. ಪ್ರತಿ ಗುರುವಾರ ಮತ್ತು ಮಂಗಳವಾರ ದೈನಂದಿನ ಲಸಿಕಾ ಕಾರ್ಯಕ್ರಮ ಜರುಗುತ್ತಿದ್ದರೂ ಸಹ ವಿಶೇಷ ಲಸಿಕಾ ಸಪ್ತಾಹ ಕಾರ್ಯಕ್ರಮ ಲಸಿಕೆ ಪಡೆಯದೇ ಬಿಟ್ಟು ಹೋದ ಮಕ್ಕಳಿಗೆ ಹಾಗೂ ಸೇವಾ ವಂಚಿತ ಪ್ರದೇಶದಲ್ಲಿ ವಿಶೇಷ ಲಸಿಕಾ ಅಭಿಯಾನ ನಡೆಸಲಾಗುತ್ತದೆ ಎಂದರು. ಸಾರ್ವತ್ರಿಕ ಲಸಿಕಾ ಕಾರ್ಯಕ್ರಮ ಯಶಸ್ವಿಗೆ ವಿವಿಧ ಇಲಾಖೆಗಳ ಸಹಕಾರ ಅತ್ಯಗತ್ಯವಾಗಿದ್ದು, ನಗರಾಭಿವೃದ್ಧಿ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಕ್ಷಣ ಇಲಾಖೆಗಳು ಅಗತ್ಯ ಸಹಕಾರ ನೀಡಬೇಕು. ನಗರಸಭೆ, ಪುರಸಭೆಗಳ ವ್ಯಾಪ್ತಿಯಲ್ಲಿ ಕೊಳಚೆ ಪ್ರದೇಶಗಳಲ್ಲಿ ಲಸಿಕಾ ಸತ್ರ ಏರ್ಪಡಿಸುವುದು ಮತ್ತು ಲಸಿಕಾ ಮಹತ್ವದ ಕುರಿತು ಅರಿವು ಮೂಡಿಸಿ, ಲಸಿಕಾಕರಣಕ್ಕೆ ಸಜ್ಜುಗೊಳಿಸಬೇಕು. ಪ್ರತಿ ತಿಂಗಳು ಸಿಟಿ ಟಾಸ್ಕ್ ಪೋರ್ಸ್ ಸಭೆ ನಡೆಸಿ, ದಢಾರ ರುಬೆಲ್ಲಾ ನಿರ್ಮೂಲನಾ ಕಾರ್ಯಕ್ರಮದ ಪ್ರಗತಿ ಪರಿಶೀಲನೆ ಮತ್ತು ಸಾರ್ವತ್ರಿಕ ಲಸಿಕಾಕರಣದ ಪ್ರಗತಿ ಪರಿಶೀಲನೆ ನಡೆಸಬೇಕು. ಯಾವುದೇ ಶಂಕಿತ ದಢಾರ ರುಬೆಲ್ಲಾ ಪ್ರಕರಣ ಕಂಡುಬಂದಲ್ಲಿ ತಕ್ಷಣ ಮಾಹಿತಿ ನೀಡಬೇಕು ಎಂದು ಮನವಿ ಮಾಡಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಎಲ್ಲಾ ಅಂಗನವಾಡಿ ಕೇಂದ್ರಗಳಲ್ಲಿ ಲಸಿಕಾ ಸತ್ರ ಹಮ್ಮಿಕೊಳ್ಳಲು ಕ್ರಮವಹಿಸುವುದು ಮತ್ತು ಎಲ್ಲ 5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ ನೀಡುವಂತೆ ಕ್ರಮವಹಿಸುವುದು. ತಮ್ಮ ವ್ಯಾಪ್ತಿಯಲ್ಲಿ ಬರುವ 5 ವರ್ಷದೊಳಗಿನ ಎಲ್ಲಾ ಮಕ್ಕಳ ದಢಾರ ರುಬೆಲ್ಲಾ ಲಸಿಕಾಕರಣದ ಮಾಹಿತಿಯನ್ನು ಕ್ರೂಢೀಕರಿಸಿ ಪರಿಶೀಲಿಸಿ ಲಸಿಕೆ ಪಡೆಯದ ಮತ್ತು ಬಿಟ್ಟು ಹೋದ ಮಕ್ಕಳಿಗೆ ಆರೋಗ್ಯ ಇಲಾಖೆಯೊಂದಿಗೆ ಸಮನ್ವಯಿಸಿ ಲಸಿಕಾಕರಣ ನಡೆಸಲು ಕ್ರಮವಹಿಸಬೇಕು. ಅಂಗನವಾಡಿ ಕಾರ್ಯಕರ್ತೆಯರು, ಮೇಲ್ವಿಚಾರಕರು ಲಸಿಕಾ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಸಹಕರಿಸಬೇಕು. ತಾಯಂದಿರ ಸಭೆಗಳಲ್ಲಿ ಲಸಿಕಾ ದಿನಾಂಕದ ಕುರಿತು, ಲಸಿಕಾ ಕಾರ್ಯಕ್ರಮದ ಕುರಿತು ತಿಳಿಸಬೇಕು ಎಂದರು.

ಶಾಲಾ ಲಸಿಕಾಕರಣ ಅಭಿಯಾನ: ಮುಂಬರುವ ಜೂನ್ ಹಾಗೂ ಜುಲೈ ಮಾಹೆಯಲ್ಲಿ ಶಾಲಾ ಲಸಿಕಾಕರಣಯನ್ನು ಅಭಿಯಾನ ರೀತಿಯಲ್ಲಿ ನಡೆಸೋಣ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್ ಸಲಹೆ ನೀಡಿದರು.

ಶಾಲಾ ಶಿಕ್ಷಣ ಇಲಾಖೆಯು ಎಲ್ಲ ಶಾಲೆಗಳಲ್ಲಿ ಲಸಿಕಾ ಸತ್ರ ಹಮ್ಮಿಕೊಳ್ಳಲು ಕ್ರಮವಹಿಸಬೇಕು. ಎಲ್ಲಾ, 5–6, 10 ಮತ್ತು 16 ವರ್ಷದ ಮಕ್ಕಳಿಗೆ ಲಸಿಕೆ ನೀಡುವಂತೆ ಕ್ರಮವಹಿಸಬೇಕು ಎಂದು ಹೇಳಿದರು.

ಆರ್‌ಸಿಹೆಚ್ ತಂತ್ರಾಂಶದಂತೆ 2023–24ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ನೋಂದಾಯಿಸಿದ 20182 ಶಿಶುಗಳ ಪೈಕಿ 19871 ಶಿಶುಗಳಿಗೆ ಪೂರ್ಣ ಪ್ರಮಾಣದ ಲಸಿಕೆ ನೀಡುವ ಮೂಲಕ ಶೇ98 ಪ್ರಗತಿ ಸಾಧನೆ ಮಾಡಲಾಗಿದೆ. 2024–25ನೇ ಸಾಲಿನಲ್ಲಿ ನೋಂದಾಯಿಸಿದ 19184 ಶಿಶುಗಳ ಪೈಕಿ 18441 ಶಿಶುಗಳಿಗೆ ಪೂರ್ಣ ಪ್ರಮಾಣದ ಲಸಿಕೆ ನೀಡುವ ಮೂಲಕ ಶೇ.96 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ.ಆರ್. ಮಂಜುನಾಥ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಸೇರಿದಂತೆ ತಾಲ್ಲೂಕು ಆರೋಗ್ಯಾಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು, ಮುಖ್ಯಾಧಿಕಾರಿಗಳು ಹಾಗೂ ಕಾರ್ಯಕ್ರಮ ಅನುಷ್ಠಾನಾಧಿಕಾರಿಗಳು ಇದ್ದರು.

# ಮುರುಘಾ ಮಠದಲ್ಲಿ ಶಿವ ಶರಣರ ಕುರಿತ ಸ್ಪರ್ಧೆ

» ಚಿತ್ರದುರ್ಗ



ದಿನಾಂಕ 29.04.2025ರಂದು ಚಿತ್ರದುರ್ಗದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿ ಶ್ರೀ ಬಸವೇಶ್ವರ ಜಯಂತಿ 2025ರ ಅಂಗವಾಗಿ ಶಿವ ಶರಣರ ಕುರಿತ ವಿವಿಧ ಸ್ಪರ್ಧೆಗಳನ್ನು ಆಯೋಜಿಸಿದ್ದು, ಎರಡನೇ ದಿನವಾದ ಇಂದು ಪ್ರಬಂಧ ಹಾಗೂ ಭಾಷಣ ಸ್ಪರ್ಧೆಗಳು ನಡೆದವು. ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಮಾತನಾಡಿದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್.ಜೆ.ಎಂ. ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದ ಡಾ.ಬಸವಕುಮಾರ ಸ್ವಾಮೀಜಿ, 12ನೇ ಶತಮಾನದಲ್ಲಿ ಒಬ್ಬ ವ್ಯಕ್ತಿಯ ಸುತ್ತ ಇದ್ದ ಶರಣರುಗಳು ಕಾಯಕ ಜೀವಿಗಳಾಗಿದ್ದರು. ಕಾಯಕವೇ ಕೈಲಾಸ ಎಂಬ ವಾಕ್ಯಕ್ಕೆ ಬದ್ಧರಾಗಿದ್ದರು. ಅಂತಹ ಶರಣರ ಕೇಂದ್ರ ಬಿಂದುವಾಗಿದ್ದವರು ಬಸವಣ್ಣನವರು. ಅವರ ಬಗ್ಗೆ ಎಷ್ಟು ವಿಚಾರಗಳನ್ನು ತಿಳಿದುಕೊಂಡರೂ ಕಡಿಮೆಯೇ. ನಾಡಿನ ಹಲವಾರು ಕವಿಗಳು, ದಾರ್ಶನಿಕರು, ವಿಚಾರವಾದಿಗಳು ಬಸವಣ್ಣನವರ ಬಗ್ಗೆ ಹೇಳಿದ ಮಾತುಗಳನ್ನು ಗಮನಿಸಿದಾಗ ಅವರ ವ್ಯಕ್ತಿತ್ವ ಎಂತಹದ್ದು ಎಂಬುದು ಅರಿವಾಗುತ್ತದೆ ಎಂದು ನುಡಿದರು.

ಶ್ರೀಮಠದ ಅನುಭವ ಮಂಟಪದಲ್ಲಿ ಸರ್ವ ಶರಣರ ದೃಷ್ಟಿಯಲ್ಲಿ ಬಸವಣ್ಣ ವಿಷಯಾಧಾರಿತ ಪ್ರಬಂಧ ಸ್ಪರ್ಧೆಯಲ್ಲಿ ದಾವಣಗೆರೆ ಚಿತ್ರದುರ್ಗ ಬಳ್ಳಾರಿ ಕೊಪ್ಪಳ ವಿಜಯನಗರ ಶಿವಮೊಗ್ಗ ರಾಯಚೂರು ಗುಲ್ಬರ್ಗ ಹಾಗೂ ನಾಡಿನ ವಿವಿಧ ಜಿಲ್ಲೆಗಳಿಂದ ಸ್ಪರ್ಧಾರ್ಥಿಗಳು ಭಾಗವಹಿಸಿದ್ದರು. ಅಲ್ಲಮ ಪ್ರಭು ಸಂಶೋಧನಾ ಕೇಂದ್ರದಲ್ಲಿ ನಡೆದ ಸಾಂಸ್ಕೃತಿಕ ನಾಯಕ ಬಸವಣ್ಣ ವಿಷಯಧಾರಿತ ಭಾಷಣ ಸ್ಪರ್ಧೆಯಲ್ಲಿ ಸುಮಾರು 50ಕ್ಕೂ ಹೆಚ್ಚು ಸ್ಪರ್ಧಾರ್ಥಿಗಳು ಭಾಗವಹಿಸಿದ್ದರು. ಸ್ಪರ್ಧೆಯ ಉಸ್ತುವಾರಿಯನ್ನು ಡಾ.ಬಿ.ರೇವಣ್ಣ, ಡಾ.ಎಸ್.ಹೆಚ್. ಪಂಚಾಕ್ಷರಿ, ಶ್ರೀ ರುದ್ರಮೂರ್ತಿ, ನವೀನ್ ಮಸ್ಕಲ್ ಹಾಗೂ ಎಸ್.ಜೆ.ಎಂ.ಕಾಲೇಜಿನ ಸಿಬ್ಬಂದಿ ವರ್ಗದವರು ವಹಿಸಿದ್ದರು.

ಕಾರ್ಯಕ್ರಮದಲ್ಲಿ ಮೈಸೂರಿನ ಬಸವ ಧ್ಯಾನ ಮಂದಿರದ ಶ್ರೀಬಸವಲಿಂಗಮೂರ್ತಿ ಸ್ವಾಮೀಗಳು, ತಿಳಿವಳ್ಳಿಯ ಕಲ್ಮಠದ ಶ್ರೀ ಬಸವ ನಿರಂಜನ ಸ್ವಾಮಿಗಳು ಹಾಗೂ ಕಲ್ಕರೆಯ ಶ್ರೀ ಪೂರ್ಣನಂದಾ ಸ್ವಾಮಿಗಳು, ವಿವಿಧ ಶಾಲಾ ಕಾಲೇಜುಗಳ ಮುಖ್ಯಸ್ಥರುಗಳು, ಸಿಬ್ಬಂದಿಯವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಚಿತ್ರದುರ್ಗ ತಾಲ್ಲೂಕು ನಿವೃತ್ತ ಕನಕ ನೌಕರರ ಸಂಘಕ್ಕೆ ಪದಾಧಿಕಾರಿಗಳ ಆಯ್ಕೆ.

# ಅಂಗನವಾಡಿ ಹುದ್ದೆಗೆ ಕಾನೂನು ಬಾಹಿರವಾಗಿ ನೇಮಕ ಪ್ರತಿಭಟನೆ



» ಚಿತ್ರದುರ್ಗ

ಸ್ಥಳೀಯರಲ್ಲದ ಆಶಾರಾಣಿ ಕೋಂ ಮಂಜುನಾಥ್ ಇವರನ್ನು ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಆಯ್ಕೆ ಮಾಡಿರುವ ಹೊಳಲ್ಕೆರೆ ತಹಶೀಲ್ದಾರ್ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ವಿರುದ್ಧ ಕಾನೂನು ರೀತಿಯ ಕ್ರಮ ಕೈಗೊಳ್ಳುವಂತೆ ಹೊಳಲ್ಕೆರೆ ತಾಲ್ಲೂಕು ಬಿ.ದುರ್ಗ ಹೋಬಳಿ ಶೃಂಗೇರಿ ಹನುಮನಹಳ್ಳಿ ಗೊಲ್ಲರಹಟ್ಟಿಯ ದೀಪ ಕೋಂ ಶಿವರಾಜ್‌ರವರು ನ್ಯಾಯವಾದಿ ಸೌಮ್ಯ ಜೋಗಿ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ವೃತ್ತದಲ್ಲಿ ಕುಟುಂಬದೊಂದಿಗೆ ಸೋಮವಾರ ಧರಣಿ ನಡೆಸಿ ಜಿಲ್ಲಾಡಳಿತದ ಮೂಲಕ ಪ್ರಧಾನಿ ನರೇಂದ್ರಮೋದಿಗೆ ಮನವಿ ಸಲ್ಲಿಸಿದರು.ಚಳ್ಳಕೆರೆ ತಾಲ್ಲೂಕು ತಳಕು ಹೋಬಳಿಯ ತಿಮ್ಮಪ್ಪನಹಳ್ಳಿ ಗೊಲ್ಲರಹಟ್ಟಿಯ ಆಶಾರಾಣಿ ದಿನಾಂಕ : 24–5–2021 ರಲ್ಲಿ ವಿವಾಹವಾಗಿದ್ದು, ನಕಲಿ ದಾಖಲೆಗಳನ್ನು ಸೃಷ್ಟಿಸಿ ಅಂಗನವಾಡಿ ಕಾರ್ಯಕರ್ತೆ ಹುದ್ದೆಯನ್ನು ಗಿಟ್ಟಿಸಿಕೊಂಡಿರುವುದರಿಂದ ಸ್ಥಳೀಯಳಾಗಿರುವ ನನಗೆ ಅನ್ಯಾಯವಾಗಿದೆ. ಬಿ.ದುರ್ಗ ನಾಡ ಕಚೇರಿ ಸೆಕ್ರೆಟರಿ, ಹೊಳಲ್ಕೆರೆ ತಾಲ್ಲೂಕು ಶಿಶು ಅಭಿವೃದ್ಧಿ ಅಧಿಕಾರಿ ಮತ್ತು ಉಪ ವಿಭಾಗಾಧಿಕಾರಿ, ಜಿಲ್ಲಾಧಿಕಾರಿ ಗಮನಕ್ಕೂ ತಂದಿರುತ್ತೇನೆ. ಕಾನೂನುಬದ್ದವಾಗಿ ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಹಳಾಗಿರುವ ನನಗೆ ಅಂಗನವಾಡಿ ಕಾರ್ಯಕರ್ತೆ ಹುದ್ದೆ ಸಿಗಬೇಕು. ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಶಾರಾಣಿ ಕೋಂ ಮಂಜುನಾಥ್ ಇವರ ಹೆಸರನ್ನು ತಡೆಹಿಡಿಯಲಾಗಿದೆ. ಆದರೆ ದಿನಾಂಕ : 20–3–2025 ರಂದು ಪ್ರಕಟಿಸಿರುವ ಆಯ್ಕೆ ಪಟ್ಟಿಯಲ್ಲಿ ಆಶಾರಾಣಿ ಕೋಂ ಮಂಜುನಾಥ್‌ರವರ ಹೆಸರಿರುವುದು ನನಗೆ ಅನ್ಯಾಯವಾಗಿದೆ. ಹಾಗಾಗಿ ಸ್ಥಳೀಯಳಲ್ಲದ ಆಶಾರಾಣಿಯ ಆಯ್ಕೆಯನ್ನು ರದ್ದುಪಡಿಸಿ ಅಂಗನವಾಡಿ ಕಾರ್ಯಕರ್ತೆ ಹುದ್ದೆಯನ್ನು ನನಗೆ ನೀಡುವಂತೆ ದೀಪ ಆಗ್ರಹಿಸಿದರು. ಮಹೇಶ್ವರಿ, ಗಂಗಮ್ಮ ಟಿ, ಜಯಮ್ಮ, ರಮೇಶ, ಲಕ್ಷ್ಮಿಕಾಂತ್, ಅಶೋಕ್ ಬೆಳಗಟ್ಟ ಇವರುಗಳು ಪ್ರತಿಭಟನೆಯಲ್ಲಿದ್ದರು.

ಪ್ರಮುಖ ಸುದ್ದಿ

### ಡಿಜಿಟಲ್ ಮಾಧ್ಯಮಕ್ಕೆ ಶಕ್ತಿ ತುಂಬಿದ ಸಿಎಂ: ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರಿಗೆ KSDMF ನಿಂದ ಅಭಿನಂದನೆ

# ಶೀಘ್ರದಲ್ಲೇ ರಾಜ್ಯಮಟ್ಟದ ಡಿಜಿಟಲ್ ಮಾಧ್ಯಮ ಸಮ್ಮೇಳನ

» ಬೆಂಗಳೂರು



ಡಿಜಿಟಲ್ ಮಾಧ್ಯಮಕ್ಕೆ ಜಾಹಿರಾತು ನೀಡಲು ರಾಜ್ಯದಲ್ಲಿ ಮೊದಲ ಬಾರಿಗೆ ಡಿಜಿಟಲ್ ಜಾಹೀರಾತು ನೀತಿ–2024 ಜಾರಿಗೊಳಿಸಿರುವುದು ನಮಗೆ ಶಕ್ತಿತುಂಬಿದೆ.

ಈ ಹಿನ್ನೆಲೆಯಲ್ಲಿ ಶೀಘ್ರ ಬೆಂಗಳೂರಿನಲ್ಲಿ ವಿಶೇಷವಾದ ಡಿಜಿಟಲ್ ಮಾಧ್ಯಮ ಸಮೇಳನವನ್ನು ಹಮ್ಮಿಕೊಂಡು ರಾಷ್ಟ್ರಮಟ್ಟದ ಹಾಗೂ ಅಂತರರಾಷ್ಟ್ರೀಯ ಮಟ್ಟದ ಡಿಜಿಟಲ್ ಮಾಧ್ಯಮದ ಪತ್ರಕರ್ತರನ್ನು ಆಹ್ವಾನಿಸುವ ಚಿಂತನೆಯಿದೆ ಎಂದು ಕರ್ನಾಟಕ ಸ್ಟೇಟ್ ಡಿಜಿಟಲ್ ಮೀಡಿಯಾ ಫೋರಂ (ಏಖಆಒಈ) ರಾಜ್ಯಾಧ್ಯಕ್ಷರಾದ ಬಿ. ಸಮೀವುಲ್ಲಾ ಹೇಳಿದ್ದಾರೆ.ಕೆಎಸ್ ಡಿಎಂಎಫ್ ವತಿಯಿಂದ ನಗರದ ಪ್ರೆಸ್ ಕ್ಲಬ್ ನಲ್ಲಿ ಮಂಗಳವಾರ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ ಪ್ರಭಾಕರ್ ಹಾಗೂ ವಾರ್ತಾ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರಿಗೆ ಏರ್ಪಡಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿ, ಡಿಜಿಟಲ್ ಮಾಧ್ಯಮ ನೀತಿಯಿಂದಾಗಿ ಬೇರೆ ಪತ್ರಿಕೆ, ಟಿವಿಯಂತೆ ಡಿಜಿಟಲ್ ಮಾಧ್ಯಮವು ಪತ್ರಿಕೋದ್ಯಮದ ಭಾಗವೆಂದು ಅಧಿಕೃತವಾಗಿದೆ. ದೇಶದಲ್ಲಿ ಡಿಜಿಟಲ್ ಪಾಲಿಸಿ ಕೆಲವು ರಾಜ್ಯಗಳಲ್ಲಿ ಇದೆಯಾದರೂ ನಮ್ಮ ರಾಜ್ಯದಲ್ಲಿ ಈ ನೀತಿ ಸಮಗ್ರವಾಗಿದ್ದು, ವೃತ್ತಿಪರವಾಗಿ ರಚನೆಯಾಗಿದೆ ಎಂದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರ ಪ್ರಯತ್ನದಿಂದಾಗಿ ರಾಜ್ಯದಲ್ಲಿ ಡಿಜಿಟಲ್ ನೀತಿಯನ್ನು ಜಾರಿಗೆ ತರುವಲ್ಲಿ ಮಹತ್ವದ ಕಾರ್ಯವನ್ನು ನಿರ್ವಹಿಸಿದ್ದಾರೆ. ಡಿಜಿಟಲ್ ಮಾಧ್ಯಮವು ಪರ್ಯಾಯ ಮಾಧ್ಯಮವಾಗಿ ನೈಜ ಪತ್ರಿಕೋದ್ಯಮ, ನಿಷ್ಪಕ್ಷಪಾತವಾಗಿ, ಮಾನವತೆಯಿಂದಾಗಿ ಪರ್ಯಾಯ ಪತ್ರಿಕೋದ್ಯಮವು ಬಹಳ ಪ್ರಾಮುಖ್ಯತೆ ಪಡೆದುಕೊಂಡಿದೆ ಎಂದರು.

ಈ ನಿಟ್ಟಿನಲ್ಲಿ ಕರ್ನಾಟಕ ಸ್ಟೇಟ್ ಡಿಜಿಟಲ್ ಮೀಡಿಯಾ ಫೋರಂ ತನ್ನ ಸಂಘಟಿತ ಪ್ರಯತ್ನದಿಂದಾಗಿ ರಾಜ್ಯದಲ್ಲಿ ಡಿಜಿಟಲ್ ಮಾಧ್ಯಮ–2024 ಜಾರಿಗೆ ತರಲಾಗಿದೆ. ಈ ನೀತಿಯಲ್ಲಿ ಪತ್ರಕರ್ತರಿಗೆ ಪೂರಕವಾಗಿ ಕೆಲವೊಂದು ಅಗತ್ಯ ಬದಲಾವಣೆ, ತಿದ್ದುಪಡಿಯಾಗಬೇಕಿದೆ ಎಂದು ಹೇಳಿದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಕೆಎಸ್ ಡಿಎಂಎಫ್ ನೀಡಿದ ಸನ್ಮಾನ ಸ್ವೀಕರಿಸಿ ಮಾತನಾಡಿ, ಸಂಸ್ಥೆಯ ಆಧ್ಯಕ್ಷರು ಹಾಗೂ ಹಿರಿಯ ಪತ್ರಕರ್ತರಾದ ಬಿ.ಸಮೀವುಲ್ಲಾ ಜೊತೆಗಿನ ವೃತ್ತಿ ಬಾಂಧವ್ಯವನ್ನು ಸ್ಮರಿಸಿದರು. ರಾಜ್ಯದಲ್ಲಿ ಡಿಜಿಟಲ್ ನೀತಿ ತರುವ ಬಗ್ಗೆ ಎರಡು ತಿಂಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಜೊತೆ ಡಿಜಿಟಲ್ ಮಾಧ್ಯಮದ ಅಗತ್ಯತೆ ಬಗ್ಗೆ ತಿಳಿ ಹೇಳಿ ಆ ಬಗ್ಗೆ ಚರ್ಚೆ ನಡೆಸಿದ್ದೆ. ಕೃತಕ ಬುದ್ಧಿಮತ್ತೆಯು ಡಿಜಿಟಲ್ ಮಾಧ್ಯಮಕ್ಕೂ ದಾಂಗುಡಿಯಿಟ್ಟಿದೆ ಎಂದರು.

ಸಣ್ಣ ಪತ್ರಿಕೆಯಂತೆ ಡಿಜಿಟಲ್ ಮಾಧ್ಯಮವನ್ನು ಕೈಹಿಡಿಯುವ ಬಗ್ಗೆ ಮುಖ್ಯಮಂತ್ರಿ ಅವರ ಜೊತೆ ಮಾತನಾಡಿ ಡಿಜಿಟಲ್ ಮಾಧ್ಯಮ ಸಂಸ್ಥೆಗಳಿಗೂ ಜಾಹೀರಾತು ನೀಡಲು ಹಣಕಾಸು ವೆಚ್ಚ, ಡಿಜಿಟಲ್ ಮೀಡಿಯಾ ನೀತಿಯ ನೀಲನಕ್ಷೆ ಬಗ್ಗೆಯೂ ತಿಳಿಸಿದೆ. ಇದಕ್ಕೆ ಸಿಎಂ ಕೂಡ ಸಹಮತ ವ್ಯಕ್ತಪಡಿಸಿದರು. ಹೀಗಾಗಿ ಡಿಜಿಟಲ್ ಜಾಹೀರಾತು ನೀತಿ ತರಲು ಸಾಧ್ಯವಾಯಿತು. ಈ ನಿಟ್ಟಿನಲ್ಲಿ ಡಿಜಿಟಲ್ ನೀತಿಯನ್ನು ಜಾರಿಗೆ ತರಲಾಗಿದೆ. ಅದರಲ್ಲಿ ಪತ್ರಕರ್ತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಮುಂದೆ ಬದಲಾವಣೆ ಮಾಡಲಾಗುವುದು ಎಂದರು.

ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಪತ್ರಕರ್ತರ ಅಭಿವೃದ್ಧಿಗಾಗಿ ಆರೋಗ್ಯ, ಗ್ರಾಮೀಣ ಪತ್ರಕರ್ತರಿಗಾಗಿ ಬಸ್ ಪಾಸ್, ದಿನಪತ್ರಿಕೆ ಹಂಚುವವರಿಗೂ ಅನುಕೂಲ ಸೇರಿದಂತೆ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಮಾಧ್ಯಮ ಮಾನ್ಯತೆಯಿರುವವರಿಗೆ ಆರೋಗ್ಯ ಸಂಜೀವಿನಿಯಡಿ ಕಾರ್ಡ್ ನೀಡಲು ಕ್ರಮ ಕೈಗೊಳ್ಳುತ್ತೇವೆ. ಡಿಜಿಟಲ್ ಮಾಧ್ಯಮದವರಿಗೂ ವಾರ್ತಾ ಇಲಾಖೆಯಿಂದ ಐಡಿ ಕಾರ್ಡ್ ಅಥವಾ ಮಾನ್ಯತಾ ಕಾರ್ಡ್ ನೀಡಲು ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರ ಜೊತೆ ಮಾತನಾಡುತ್ತೇನೆ ಎಂದು ಅವರು ಹೇಳಿದರು.ಪ್ರೆಸ್ ಕ್ಲಬ್ ಅಧ್ಯಕ್ಷರಾದ ಶ್ರೀಧರ್ ಮಾತನಾಡಿ, ಡಿಜಿಟಲ್ ಮೀಡಿಯಾ ಫೋರಂ ಈಗಿನ ಡಿಜಿಟಲ್ ಮಾಧ್ಯಮಕ್ಕೆ ಅತ್ಯಗತ್ಯವಾಗಿತ್ತು. ವೃತ್ತಿಪರ ಡಿಜಿಟಲ್ ಪತ್ರಕರ್ತರಿಗೆ ಈ ಕೆಎಸ್ ಡಿಎಂಎಫ್ ಫೋರಂ ಹೆಚ್ಚಿನ ಅನುಕೂಲವಾಗಿದೆ ಎಂದರು.

## ಫಾಸ್ಟ್ ನ್ಯೂಸ್

### ವಿಶ್ವನಾಥ ನರಹರಿನಗರ ಹಾಲು ಉತ್ಪಾದಕರ ಸಂಘದ ಉಪಾಧ್ಯಕ್ಷ



» **ಚಳ್ಳಕೆರೆ**

ತಾಲ್ಲೂಕಿನ ನರಹರಿ ನಗರ ಹಾಲುಉತ್ಪಾದಕರ ಸಹಕಾರ ಸಂಘದ ಉಪಾಧ್ಯಕ್ಷ ಸ್ಥಾನ ತೆರವಾಗಿದ್ದು, ಹಾಲುಉತ್ಪಾದಕರ ಸಂಘದ ಉತ್ಸಾಹಿ ನಿರ್ದೇಶಕ ಎನ್.ವಿಶ್ವನಾಥರವರನ್ನು ಸಂಘದ ನೂತನ ಉಪಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು ಎಂದು ಕೆಎಂಎಫ್ ಜಿಲ್ಲಾ ನಿರ್ದೇಶಕ ಬಿ.ಸಿ.ಸಂಜೀವಮೂರ್ತಿ ತಿಳಿಸಿದ್ದಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ನರಹರಿ ನಗರದ ಹಾಲು ಉತ್ಪಾದಕರ ಸಂಘದ ಕಾರ್ಯಾಲಯದಲ್ಲಿ ಹಾಜರಿದ್ದ ಎಲ್ಲಾ ನಿರ್ದೇಶಕ ಸಮಕ್ಷಮದಲ್ಲಿ ಚರ್ಚೆ ನಡೆಸಿ ಎಲ್ಲರ ಅಭಿಪ್ರಾಯವನ್ನು ಪಡೆದು ಉಪಾಧ್ಯಕ್ಷರಾಗಿ ಎನ್.ವಿಶ್ವನಾಥರವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.
ಆಯ್ಕೆ ಪ್ರಕ್ರಿಯೆ ನಂತರ ಮಾತನಾಡಿದ ಕೆಎಂಎಫ್ ಜಿಲ್ಲಾನಿರ್ದೇಶಕ ಬಿ.ಸಿ.ಸಂಜೀವಮೂರ್ತಿ, ಶಿವಮೊಗ್ಗ ಹಾಲು ಒಕ್ಕೂಟ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿದೆ. ಹಾಲು ಉತ್ಪಾದನೆಯನ್ನು ಹೆಚ್ಚಿಸುತ್ತಿದೆ, ವಿಶೇಷವಾಗಿ ಗ್ರಾಮೀಣ ಭಾಗಗಳಲ್ಲಿ ಹಾಲುಉತ್ಪಾದಕರ ಸಹಕಾರ ಸಂಘದಲ್ಲಿ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವವರಿಗೆ ನೇರವಾಗಿ ಆಯ್ಕೆ ಮಾಡಿ ಅವರಿಗೆ ಅಧಿಕಾರ ನೀಡಲಾಗುತ್ತಿದೆ. ಉಪಾಧ್ಯಕ್ಷರಾಗಿ ಎನ್.ವಿಶ್ವನಾಥರವರು ಆಯ್ಕೆ ಮಾಡಲು ಅವರ ಕಾರ್ಯಕ್ಷತೆ ಮಾನದಂಡವಾಗಿದೆ ಎಂದರು. ಆಡಳಿತ ಮಂಡಳಿ ನಿರ್ದೇಶಕರಾದ ಎಸ್.ಕಾರ್ತಿಕ್, ಬಿ.ಆರ್.ಪುಪ್ಪ, ಜಿ.ಬಸವರಾಜು, ಸುರೇಶ್‌ಕುಮಾರ್, ಪುಲ್ಲಾರೆಡ್ಡಿ, ಟಿ.ಶಿವಣ್ಣ, ಪುಪ್ಪ, ಕಾರ್ಯದರ್ಶಿ ಸ್ವರೂಪ್ ಮುಂತಾದವರು ಉಪಸ್ಥಿತರಿದ್ದರು.

### ಅಂಬೇಡ್ಕರ್ ಮತ್ತು ಬಾಬುಜಿ ಆದರ್ಶ ನಮ್ಮೆಲ್ಲರಿಗೂ ಪ್ರೇರಣೆ: ಹೊನ್ನೂರುಮಾರಣ್ಣ



» **ಚಳ್ಳಕೆರೆ**

ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಹಸಿರುಕ್ರಾಂತಿಹರಿಕಾರ ಡಾ.ಬಾಬು ಜಗಜೀವನರಾಮ್ ಶೋಷಣೆ ಮತ್ತು ಅವಮಾನಕ್ಕೊಳಗಾದ ಸಮುದಾಯಗಳಿಗೆ ನ್ಯಾಯವನ್ನು ಕೊಡಿಸುವ ನಿಟ್ಟಿನಲ್ಲಿ ಹೋರಾಟ ನಡೆಸಿದ ಮಹಾನೀಯರು. ತಮ್ಮ ಸಂವಿಧಾನದ ಮೂಲಕ ಸಮಾನತೆಯ ಬದುಕನ್ನು ಸಾರಿದವರು. ನಾವೆಲ್ಲರೂ ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಪತ್ರಕರ್ತ ಹೊನ್ನೂರುಮಾರಣ್ಣ ತಿಳಿಸಿದರು. ಅವರು, ತಳಕು ಹೋಬಳಿ ಹೊಸಹಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ ಮತ್ತು ಡಾ.ಬಾಬು ಜಗಜೀವನರಾಮ್ 118ನೇ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಅಂಬೇಡ್ಕರ್‌ರವರ ಪರಿಶ್ರಮದಿಂದ ಮೀಸಲಾತಿ ಹೋರಾಟ ಇಂದಿಗೂ ಜೀವಂತವಾಗಿದೆ. ಸರ್ಕಾರ ಇತ್ತೀಚೆಗೆ ಒಳಮೀಸಲಾತಿ ಸೌಲಭ್ಯ ನೀಡುವ ದೃಢನಿರ್ಧಾರ ಕೈಗೊಂಡಿದೆ. ಸಮುದಾಯದ ಸಮೀಕ್ಷೆ ಮೇ.5ರಿಂದ ಆರಂಭವಾಗಲಿದ್ದು, ಪ್ರತಿಯೊಬ್ಬ ಮಾದಿಗ ಸಮುದಾಯದ ವ್ಯಕ್ತಿ ಮಾದಿಗ ಎಂದೇ ನಮೂದಿಸುವಂತೆ ಮನವಿ ಮಾಡಿದರು. ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ರಾಜಣ್ಣ, ಸದಸ್ಯರಾದ ಚಂದ್ರು, ಸೈಯದ್‌ಕರೀಂ, ಎಸ್.ರಾಜಣ್ಣ, ಆರ್.ರುದ್ರಮುನಿ, ಚಂದ್ರಯ್ಯ, ದುರುಗೇಶ್, ವೀರಣ್ಣ, ಕರಿಯಣ್ಣ, ವೆಂಕಟೇಶ್, ತಿಪ್ಪೇಶ್, ನಾಗೇಶ್, ರವಿ ಮುಂತಾದವರು ಭಾಗವಹಿಸಿದ್ದರು.

### ನಿವೃತ್ತ ಕನಕ ನೌಕರರ ಸಂಘಕ್ಕೆ ಪದಾಧಿಕಾರಿಆಯ್ಕೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ನಿವೃತ್ತ ಕನಕ ನೌಕರರ ಸಂಘಕ್ಕೆಈ ಕೆಳಕಂಡಂತೆ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. ಅಧ್ಯಕ್ಷರಾಗಿ ರಮೇಶ್ ಮದುರಿ, ಗೌರವಾಧ್ಯಕ್ಷರಾಗಿ ಬೀರಪ್ಪ, ಉಪಾಧ್ಯಕ್ಷರುಗಳಾಗಿ ಲೋಕೇಶ್ವರಪ್ಪ, ವೀರಣ್ಣ, ರವೀಂದ್ರನಾಥ್, ರಾಜಣ್ಣ, ಜಂಟಿ ಕಾರ್ಯದರ್ಶಿಯಾಗಿ ಹನುಮಂತಪ್ಪ ಕಾಯಾಧ್ಯಕ್ಷರಾಗಿ ವೀರಭದ್ರಪ್ಪ, ಕಾರ್ಯದರ್ಶಿಯಾಗಿ ಗುರುರಾಜ್ ಬಿ.ಜಿ, ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯದರ್ಶಿಯಾಗಿ ಬಸವರಾಜ್ ಯು.ಸಿ, ಖಜಾಂಚಿಯಾಗಿ .ಸೀತಾರಾಮಪ್ಪ, ನಿರ್ದೇಶಕರುಗಳಾಗಿ ನಾಗರಾಜ್, ತಿಪ್ಪೇಸ್ವಾಮಿ ಇವರುಗಳು ಆಯ್ಕೆಯಾಗಿದ್ದಾರೆ.

ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಆಯೋಗದ ಸಭೆಯಲ್ಲಿ ಆರ್ಥಿಕ ತಜ್ಞ ಪ್ರೊ.ಎಂ.ಗೋವಿಂದರಾವ್

# ದಾವಣಗೆರೆ ಜಿಲ್ಲೆ ಅಭಿವೃದ್ಧಿ ಹೊಂದಿದ ಪ್ರದೇಶವಾದರೂ, ಚನ್ನಗಿರಿ ತಾಲ್ಲೂಕು ಸೂಚ್ಯಂಕದಲ್ಲಿ ಹಿಂದುಳಿದ ಪ್ರದೇಶ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯು ಅಭಿವೃದ್ಧಿ ಹೊಂದಿದ ಪ್ರದೇಶವಾಗಿ ಹೊರ ಹೊಮ್ಮಿದೆ. ಆದರೆ 0.78 ಸೂಚ್ಯಂಕದೊಂದಿಗೆ ಚನ್ನಗಿರಿ ಅತ್ಯಂತ ಹಿಂದುಳಿದ ತಾಲ್ಲೂಕಾಗಿದೆ. ಜಗಳೂರು ಮತ್ತು ಹೊನ್ನಾಳಿ ಅನುಕ್ರಮವಾಗಿ 0.80 ಮತ್ತು 0.86 ಸೂಚ್ಯಂಕದೊಂದಿಗೆ ಅತೀ ಹಿಂದುಳಿದ ತಾಲ್ಲೂಕು ಪ್ರದೇಶಗಳಾಗಿವೆ ಎಂದು ಪ್ರಾದೇಶಿಕ ಅಸಮತೋಲನಾ ನಿವಾರಣಾ ಆಯೋಗದ ಅಧ್ಯಕ್ಷರು ಹಾಗೂ ಆರ್ಥಿಕ ತಜ್ಞರಾದ ಪ್ರೊ. ಎಂ.ಗೋವಿಂದರಾವ್ ಅಭಿಪ್ರಾಯಪಟ್ಟರು.




ಜಿಲ್ಲಾ ಪಂಚಾಯಿತಿ ಎಸ್. ಎಸ್. ಮಲ್ಲಿಕಾರ್ಜುನ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ರಾಜ್ಯದ 175 ತಾಲ್ಲೂಕುಗಳನ್ನು ಅಧ್ಯಯನ ಮಾಡಿ ಡಾ. ಡಿ.ಎಂ. ನಂಜುಂಡಪ್ಪ ಅವರು 39 ಅತ್ಯಂತ ಹಿಂದುಳಿದ ತಾಲ್ಲೂಕುಗಳು, 40 ಅತಿ ಹಿಂದುಳಿದ ತಾಲ್ಲೂಕುಗಳು ಹಾಗೂ 35 ಹಿಂದುಳಿದ ತಾಲ್ಲೂಕುಗಳು ಎಂದು ಹಿಂದುಳಿದಿರುವಿಕೆಯನ್ನು ಗುರುತಿಸಿದ್ದರು. ಇದರಲ್ಲಿ ಉತ್ತರ ಕರ್ನಾಟಕ ಭಾಗದ 26 ಅತ್ಯಂತ ಹಿಂದುಳಿದ ತಾಲ್ಲೂಕುಗಳಾಗಿದ್ದರೆ, ದಕ್ಷಿಣ ಕರ್ನಾಟಕದ 13 ತಾಲ್ಲೂಕುಗಳು ಇದ್ದವು.ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ದಾವಣಗೆರೆ ಜಿಲ್ಲೆಗೆ ಶಿಫಾರಸ್ಸಿನ ಅನ್ವಯ, ಸರ್ಕಾರ 2007-08 ರಿಂದ 2023-24 ರವರೆಗೆ 821 ಕೋಟಿ ರೂ. ಗಳ ಹಂಚಿಕೆ ಮಾಡಿ ಇದರಲ್ಲಿ ರೂ. 698 ಕೋಟಿ ಅಭಿವೃದ್ದಿಗೆ ಬಿಡುಗಡೆಯಾಗಿದ್ದು, ಈ ಪೈಕಿ 640 ಕೋಟಿ ರೂ. ಖರ್ಚಾಗಿದೆ.

ರಾಜ್ಯದಲ್ಲಿ ಪ್ರಸ್ತುತ 240 ತಾಲ್ಲೂಕುಗಳಿವೆ, ಇಷ□□□ಂದು ಹಣ ಖರ್ಚು ಮಾಡಿದ ಬಳಿಕ, ತಾಲ್ಲೂಕುಗಳ ಹಿಂದುಳಿದಿರುವಿಕೆ ಕಡಿಮೆ ಆಗಿದೆಯೇ, ಯಾವೆಲ್ಲಾ ಕ್ಷೇತ್ರದಲ್ಲಿ ಏನೇನು ಅಭಿವೃದ್ಧಿಯಾಗಿದೆ. ಹಣ ನೀಡಿದರೂ ಅಭಿವೃದ್ಧಿ ಆಗಲಿಲ್ಲವೆಂದರೆ ಅದಕ್ಕೆ ಕಾರಣಗಳೇನು, ಎಂಬುದನ್ನು ಕೂಲಂಕಷವಾಗಿ ಪರಿಶೀಲಿಸಿ, ರಾಜ್ಯದಲ್ಲಿನ ಅಸಮತೋಲನ ಸರಿಪಡಿಸಿ, ಸಮಗ್ರ ಕರ್ನಾಟಕ ಅಭಿವೃದ್ಧಿಗೊಳ್ಳಲು ಏನೆಲ್ಲ ಕ್ರಮ ವಹಿಸಬೇಕು ಎನ್ನುವ ಉದ್ದೇಶದಿಂದ ಸರ್ಕಾರ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಆಯೋಗ ರಚಿಸಿದೆ.

ಆಯೋಗ ಮಾರ್ಚ್-2024ರಲ್ಲಿ ರಚಿಸಲಾಗಿದ್ದರೂ, ಸೆಪ್ಟೆಂಬರ್-2024 ರಿಂದ ಪೂರ್ಣ ಪ್ರಮಾಣದಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಕಾರ್ಯನಿರ್ವಹಿಸಲು ಪ್ರಾರಂಭಿಸಿತು. ರಾಜ್ಯದಲ್ಲಿ ದಕ್ಷಿಣ ಕನ್ನಡ ಜಿಲ್ಲೆ, ಉಡುಪಿ ಮತ್ತು ಬೆಂಗಳೂರು ನಗರ ಜಿಲ್ಲೆಗಳು ಮಾತ್ರ ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ಧಿಯ ವೇಗ ಹೊಂದಿದ್ದು, ಉಳಿದ ಜಿಲ್ಲೆಗಳಲ್ಲಿ ಅಭಿವೃದ್ಧಿ ವೇಗ ಪಡೆದಿಲ್ಲ. ಮೂಲಭೂತ ಸೌಕರ್ಯ, ವಿದ್ಯುತ್, ರಸ್ತೆ, ಹಣಕಾಸು, ಶಿಕ್ಷಕರು ಮತ್ತು ವಿದ್ಯಾರ್ಥಿ ಅನುಪಾತ, ಸಾಕ್ಷರತೆ, ವೈದ್ಯಕೀಯ ವ್ಯವಸ್ಥೆ, ಕೈಗಾರಿಕೆ, ನೀರಾವರಿ, ಕೃಷಿ, ಸೇವಾ ವಲಯ ಮುಂತಾದ 32 ಸೂಚ್ಯಂಕಗಳನ್ನು ಆಧರಿಸಿ ಆಯೋಗ ವರದಿ ಸಂಗ್ರಹಿಸಲಿದೆ. ಆಯೋಗ ಪ್ರತಿ ಜಿಲ್ಲೆಗೆ ಭೇಟಿ ನೀಡಿ, ಅಲ್ಲಿನ ಜನರ ಅನುಭವ, ಅಭಿಪ್ರಾಯಗಳನ್ನು ಪಡೆದು, ಸಂಗ್ರಹಿಸಿದ ಮಾಹಿತಿ, ಅಧ್ಯಯನದ ವರದಿಗಳ ಆಧಾರದಲ್ಲಿ ಅಸಮತೋಲನ ನಿವಾರಣೆ ಹಾಗೂ ಸಮಗ್ರ ಕರ್ನಾಟಕದ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಶಿಫಾರಸ್ಸುಗಳ ವರದಿಯನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತದೆ ಎಂದರು.

**ಕೃಷಿ ಮತ್ತು ಕೈಗಾರಿಕೆಗೆ ಒತ್ತು ನೀಡಬೇಕು : ಶಾಸಕ ಬಸವಂತಪ್ಪ** ಜಿಲ್ಲೆಯು ಕೃಷಿ ಮತ್ತು ಕೈಗಾರಿಕೋದ್ಯಮದಲ್ಲಿಪ್ರಥಮಸ್ಥಾನದಲ್ಲಿದೆ. ಆದರೆ ಪ್ರಸ್ತುತ ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕಿ ಕೆಲವು ಕೈಗಾರಿಕೆಗಳು ಸಶಿಸುತ್ತಿದ್ದು, ಕೃಷಿ ಉತ್ಪಾದನೆಯಲ್ಲಿ ಗಣನೀಯವಾಗಿ ಇಳಿಮುಖ ಕಂಡಿದೆ. ಆಗಾಗಿ ರೈತರು ಆರ್ಥಿಕವಾಗಿ ಸಬಲರಾಗಬೇಕಾದರೆ ಅಗತ್ಯವಾದ ವಿದ್ಯುತ್, ನೀರು ಸಮರ್ಪಕವಾಗಿ ಒದಗಿಸಬೇಕು. ಕೆರೆಗಳಿಗೆ ನೀರು ತುಂಬಿಸುವ ಕೆಲಸ ಮಾಡಬೇಕು. ರೈತರು ಬೆಳೆದ ಬೆಳೆಗೆ ಬೆಂಬಲ ಬೆಲೆ ಒದಗಿಸುವ ಮೂಲಕ ಕೃಷಿಗೆ ಒತ್ತು ನೀಡಬೇಕು. ಅದಷ□□□ ಅಲ್ಲದೇ ಕೃಷಿಗೆ ಸಂಬಂಧಿಸಿದ ಕೈಗಾರಿಕೆ, ಕಾರ್ಖಾನೆಗಳಿಗೆ ಮೊದಲ ಆದ್ಯತೆ ನೀಡುವುದರ ಜೊತೆಗೆ ಆರೋಗ್ಯದ ಕಡೆಗೂ ಗಮನ ಹರಿಸಬೇಕು ಎಂದರು.

ಚನ್ನಗಿರಿ ಶಾಸಕ ಬಸವರಾಜ್ ವಿ. ಶಿವಗಂಗಾ ಮಾತನಾಡಿ, ಜಿಲ್ಲೆಯಲ್ಲಿ ಚನ್ನಗಿರಿ ತಾಲ್ಲೂಕು ಅತ್ಯಂತ ಹಿಂದುಳಿದ ಪ್ರದೇಶವಾಗಿದ್ದು, ಅದರಲ್ಲೂ ಶೈಕ್ಷಣಿಕವಾಗಿ ಬಹಳಷ್ಟು ಹಿಂದುಳಿದಿದೆ. ಇದಕ್ಕೆ ಪ್ರಮುಖ ಕಾರಣ ಶಿಕ್ಷಕ, ಉಪನ್ಯಾಸಕರ ಕೊರತೆ. ಹೀಗಿದ್ದಲ್ಲಿ ಉತ್ತಮವಾದ ಫಲಿತಾಂಶ ನಿರೀಕ್ಷಿಸಲು ಹೇಗೆ ಸಾಧ್ಯ. ಆದ್ದರಿಂದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿದ್ದಲ್ಲಿ, ಉಳಿದೆಲ್ಲವೂ ತಾನಾಗಿಯೇ ಬರುತ್ತದೆ ಎಂದ ಅವರು, ಜಿಲ್ಲೆಯ ಚನ್ನಗಿರಿ ಹಾಗೂ ಜಗಳೂರು ತಾಲ್ಲೂಕುಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಪುಲ ಅವಕಾಶಳಿವೆ.ಪ್ರವಾಸೋದ್ಯಮಅಭಿವೃದ್ಧಿಗೆ ಹಾಗೂ ಜಿಲ್ಲೆಯಲ್ಲಿ ಸಂಶೋಧನಾ ಕೇಂದ್ರ, ಏರ್ಪೋರ್ಟ್ ಸ್ಥಾಪಿಸಲು ಒತ್ತು ನೀಡಿದಲ್ಲಿ ಜಿಲ್ಲೆ ಅಭಿವೃದ್ಧಿ ಹೊಂದುವುದರ ಜೊತೆಗೆ ಉದ್ಯೋಗಾವಕಾಶಗಳು ಸಹ ಹೆಚ್ಚಲಿದೆ ಎಂದು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುರೇಶ್.ಬಿ.ಇಟ್ನಾಳ್ ಮಾತನಾಡಿ ಅಂಗನವಾಡಿ ಕೇಂದ್ರಗಳಲ್ಲಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ ಶಿಕ್ಷಣದ ಕುರಿತು ತರಬೇತಿಯು ತುಂಬಾ ಅವಶ್ಯಕತೆ ಇದೆ. ಕಾರಣ 6 ವರ್ಷ ತುಂಬುವವರೆಗೂ ಮಕ್ಕಳೂ 1ನೇ ತರಗತಿಗೆ ಪ್ರವೇಶ ಇರುವುದಿಲ್ಲ. ಆದ್ದರಿಂದ ಅವರು ಹೆಚ್ಚಿನ ಕಾಲ ಅಂಗನವಾಡಿ ಕೇಂದ್ರಗಳಲ್ಲೇ ಮೂಲ ಅಕ್ಷರಗಳನ್ನು ಕಲಿಯಬೇಕಾಗಿರುತ್ತದೆ. 9ನೇ ತರಗತಿಯ ವಿದ್ಯಾರ್ಥಿಗಳಿಗೆ ಲ್ಯಾಬ್ ವಸ್ತುಗಳು ಬೇಕಾಗಿದ್ದು, ಹಾಗೂ ಸರ್ಕಾರಿ ಶಾಲೆಗಳಲ್ಲಿ ಗಣಿತ ಮತ್ತು ವಿಜ್ಞಾನ ಶಿಕ್ಷಕರ ಅವಶ್ಯಕತೆ ಬಹಳ ಇದೆ.

ಜಗಳೂರು ತಾಲ್ಲೂಕು ಆಸ್ಪತ್ರೆಗಳನ್ನು 24*7 ಆಗಿ ನಿರ್ಮಾಣ ಮಾಡಬೇಕಾಗಿರುತ್ತದೆ. ಹಾಗೂ ಜಗಳೂರಿಗೆ ಆಶಾ ಕಾರ್ಯಕರ್ತೆಯರನ್ನು ಹೆಚ್ಚಾಗಿ ನೀಡಬೇಕು ಇದರಿಂದ ಗರ್ಭಿಣಿ ಮಹಿಳೆಯರ ಸಾವಿನ ಪ್ರಮಾಣವನ್ನು ಕಡಿಮೆ ಮಾಡಬಹುದು ಎಂದರು.

ಈ ವೇಳೆ ಸದಸ್ಯ ಕಾರ್ಯದರ್ಶಿ ಡಾ. ವಿಶಾಲ್, ಡಾ.ಎಸ್.ಬಾಗಲಕೋಟ್, ಜಿಲ್ಲಾ ರಕ್ಷಣಾಧಿಕಾರಿ ಉಮಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ. ಎನ್. ಲೋಕೇಶ್, ಜಿ.ಪಂ. ಮುಖ್ಯ ಯೋಜನಾಧಿಕಾರಿ ಮಲ್ಲನಾಯಕ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಶ್ರೀನಿವಾಸ್ ಚಿಂತಾಲ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ;ನಾಗೇಂದ್ರಪ್ಪ, ಪ್ರಭಾರ ಡಿಡಿಪಿಐ ರಾಜಶೇಖರ್, ಕೃಷಿ ಮತ್ತು ಕೈಗಾರಿಕಾ ಉಪನಿರ್ದೇಶಕ ಶಿವಲಿಂಗಪ್ಪ ಕುಂಬಾರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಪುನೀತ್ ರಾಜಕುಮಾರ್ ಕ್ರಿಕೇಟ್ ಲೀಗ್-2025

» **ಚಿತ್ರದುರ್ಗ**



ಯುವರತ್ನ ಕ್ರಿಕೇಟರ್ಸ್, ಐಕಾನ್ ಸ್ಟಾರ್ಸ್ ಜೆ.ಜೆ.ಹಟ್ಟಿ ಗೆಳೆಯರ ಬಳಗದವತಿಯಿಂದ 2ನೇ ಬಾರಿಗೆ ಮೇ.1ರಿಂದ4ರವರೆಗೆನಗರದಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಪುನೀತ್ ರಾಜಕುಮಾರ್ ರವರ 50ನೇ ಹುಟ್ಟು ಹಬ್ಬದ ಪ್ರಯುಕ್ತ ದುರ್ಗನ್ಸ್ ಪುನೀತ್ ರಾಜಕುಮಾರ್ ಕ್ರಿಕೇಟ್ ಲೀಗ್-2025 ಲೀಗ್ ಕಮ್ ನಾಕೌಟ್ ಕ್ರಿಕೇಟ್ ಪಂದ್ಯಾವಳಿಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಅರ್ಜುನ್ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾಹಿತಿ ನೀಡಿದ ಅವರು ಈಗಾಗಲೇ ಒಂದು ಬಾರಿ ಈ ರೀತಿಯಾದ ಪಂದ್ಯಾವಳಿಯನ್ನು ನಡೆಸಲಾಗಿದೆ. ಇದು ಎರಡನೇ ಬಾರಿಯಾಗಿದೆ. ಚಿತ್ರದುರ್ಗದಲ್ಲಿ ಕ್ರಿಕೇಟ್ ಆಡುವ 30 ತಂಡಗಳು ಇದ್ದು ಇದರಲ್ಲಿ ಒಂದೊಂದು ತಂಡದಿಂದ ತಲಾ ಮೂರು ಜನರನ್ನು ಆಯ್ಕೆ ಮಾಡು ಒಂದು ತಂಡವನ್ನು ನಿರ್ಮಾಣ ಮಾಡಲಾಗಿದ್ದು ಇದೇ ರೀತಿ ಒಂದೊಂದು ತಂಡದ ಮಾಲಿಕರುಗಳು ಸೇರಿ 12 ತಂಡಗಳನ್ನು ರಚನೆ ಮಾಡಲಾಗಿದೆ ಎಂದರು.

ಈ ಪಂದ್ಯಾವಳಿಯಲ್ಲಿ 12 ತಂಡಗಳು ಆಟವನ್ನು ಆಡಲಿವೆ, ಇದರ ಪ್ರಥಮ ಬಹುಮಾನವಾಗಿ 1.50ಲಕ್ಷದ್ವಿತೀಯಬಹುಮಾನವಾಗಿ 75.000ದ ಜೊತೆಗೆ ಆಕರ್ಷಕ ಟ್ರೋಫಿಯನ್ನು ನೀಡಲಾಗುವುದು ಇದ್ದಲ್ಲದೆ ಸರಣಿ ಶ್ರೇಷ್ಠರವರಿಗೆ ಟಿ.ವಿ. ಉತ್ತಮ ಬ್ಯಾಟ್ಸ್‌ಮನ್‌ರಿಗೆ ವಾಷಿಂಗ್ ಮಿಷಿನ್, ಉದಯೋನ್ಮಖ ಆಟಗಾರನಿಗೆ ಮೊಬೈಲ್ ಹಾಗೂ ಉತ್ತಮ ಬೌಲರ್‌ಗೆ ರೆಫ್ರಿಜರೇಟರ್‌ನ್ನು ಬಹುಮಾನವಾಗಿನೀಡಲಾಗುವುದು ಎಂದು ತಿಳಿಸಿದರು.

ಪ್ರವಾಸಿ ಮಂದಿರದಲ್ಲಿ ನಡೆದ ಪ್ರತಿಕಾ ಗೋಷ್ಟಿಯಲ್ಲಿ ನಗರಸಭಾ ಸದಸ್ಯರಾದ ನಸ್ರುಲ್ಲಾರವರು ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದವರಿಗೆ ನೀಡುವ ಟ್ರೋಫಿಯನ್ನು ಕ್ರೀಡಾಪಟುಗಳಿಗೆ ನೀಡುವ ಜರ್ಸಿಯನ್ನು ಬಿಡುಗಡೆ ಮಾಡಿದರು. ಮೇ.1ರ ಗುರುವಾರ ಬೆಳಿಗ್ಗೆ 10 ಗಂಟೆಗೆ ಪಂದ್ಯಾವಳಿ ಉದ್ಘಾಟನೆಯಾಗಲಿದ್ದು ಮೇ. 4 ರ ಸಂಜೆ ಪಂದ್ಯಾವಳಿಯ ಸಮಾರೋಪ ಸಮಾರಂಭ ನಡೆಯಲಿದೆ ಇದರಲ್ಲಿ ನಗರದ ಗಣ್ಯ ವ್ಯಕ್ತಿಗಳು ಭಾಗವಹಿಸಲಿದ್ದಾರೆ

ಈ ಸಂದರ್ಭದಲ್ಲಿ ರಂಗನಾಥ್, ನಾಗರಾಜ್, ಚೇತನ್, ಇರ್ಫಾನ್, ಶಂಕರ್ ಮೂರ್ತಿ, ಸಲ್ಮಾನ್ ಖಾನ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಜವನಗೊಂಡನಹಳ್ಳಿ: ಪಿಂಚಣಿ ಅದಾಲತ್ ಕಾರ್ಯಕ್ರಮ



» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಜವನಗೊಂಡನಹಳ್ಳಿ ಹೋಬಳಿಯ ನಾಡಕಚೇರಿ ಕಾರ್ಯಾಲಯದಲ್ಲಿ ಸೋಮವಾರ ಪಿಂಚಣಿ ಅದಾಲತ್ ಕಾರ್ಯಕ್ರಮ ನಡೆಯಿತು. ಕಂದಾಯ ಇಲಾಖೆ ವತಿಯಿಂದ ಚಿತ್ರದುರ್ಗ ಉಪವಿಭಾಗಾಧಿಕಾರಿ ಮಹೆಬೂಬ್ ಜಿಲಾನಿ ಖುರೇಷಿ ಅವರ ಅಧ್ಯಕ್ಷತೆಯಲ್ಲಿ ನಡೆದ ಪಿಂಚಣಿ ಅದಾಲತ್‌ನಲ್ಲಿ ಸಾಮಾಜಿಕ ಭದ್ರತಾ ಯೋಜನೆಯ ಫಲಾನುಭವಿಗಳ ಕುಂದು ಕೊರತೆ ಆಲಿಸಿ, ಹೊಸದಾಗಿ ಪಿಂಚಣಿ ಮಂಜೂರಾತಿ ಆದೇಶಪ್ರತಿಗಳನ್ನು ನೀಡಲಾಯಿತು. ಕಾರ್ಯಕ್ರಮದಲ್ಲಿ ಹಿರಿಯೂರು ತಹಶೀಲ್ದಾರ್ ರಾಜೇಶ್, ಪ್ರಭಾರಿ ನಾಡಕಚೇರಿ ತಹಶೀಲ್ದಾರ್ ಶಿವಕುಮಾರ್, ಕರ್ನಾಟಕ ಗ್ರಾಮೀಣ ಬ್ಯಾಂಕಿನ ವ್ಯವಸ್ಥಾಪಕರು ಹಾಗೂ ಹೋಬಳಿಯ ಎಲ್ಲಾ ಗ್ರಾಮಾಡಳಿತ ಅಧಿಕಾರಿಗಳು ಮತ್ತು ನಾಡಕಚೇರಿ ಸಿಬ್ಬಂದಿಗಳು, ಸಾಮಾಜಿಕ ಭದ್ರತಾ ಯೋಜನೆಯ ಫಲಾನುಭವಿಗಳು ಇದ್ದರು.

## ಪ್ರಮುಖ ಸುದ್ದಿ

# ಬಸವ ಜಯಂತಿ: ವೀರಶೈವ ಸಮಾಜದಿಂದ ಬೈಕ್ ರ್‍ಯಾಲಿ

» **ಚಿತ್ರದುರ್ಗ**

ವಿಶ್ವ ಗುರು, ಮಹಾಮಾನವತಾವಾದಿ ಸಾಂಸ್ಕೃತಿಕ ನಾಯಕ ಶ್ರೀ ಬಸವಣ್ಣನವರ ಜಯಂತ್ಯೋತ್ಸವದ ಅಂಗವಾಗಿ ವೀರಶೈವ ಸಮಾಜದವತಿಯಿಂದ ಮಂಗಳವಾರ ಬೈಕ್ ರ್‍ಯಾಲಿಯನ್ನು ನಡೆಸಲಾಯಿತು.



ಹೊಳಲ್ಕೆರೆ ರಸ್ತೆಯ ಚಂದ್ರವಳ್ಳಿ ಕ್ರಾಸ್‌ನ ಬಸವ ಪುತ್ಥಳಿಗೆ ವೀರಶೈವ ಸಮಾಜದ ಅಧ್ಯಕ್ಷರಾದ ಹೆಚ್.ಎನ್.ತಿಪ್ಪೇಸ್ವಾಮಿ ಹಾರವನ್ನು ಸಲ್ಲಿಸಿ ತದ ನಂತರ ಬೈಕ್ ರ್‍ಯಾಲಿಯನ್ನು ಆರಂಭ ಮಾಡಲಾಯಿತು. ಮೆರವಣಿಗೆಗೆ ಆಗಮಿಸಿದ್ದ ಬೈಕ್‌ಗಳಿಗೆ ಕೇಸರಿ ಬಣ್ಣದ ಬಟ್ಟೆಯಲ್ಲಿ ಬಸವೇಶ್ವರ ಭಾವಚಿತ್ರವನ್ನು ಮುದ್ರಿಸಿದ ಧ್ವಜವನ್ನು ಕಟ್ಟಲಾಗಿತ್ತು, ಇದರೊಂದಿಗೆ ಬಿಳಿ ಬಣ್ಣದ ಟೋಪಿಯಲ್ಲಿ ಬಸವೇಶ್ವರ ಭಾವಚಿತ್ರವನ್ನು ಮುದ್ರಿಸಿದನ್ನು ತಲೆಗೆ ಧರಿಸಲಾಯಿತು. ದಾರಿಯುದ್ದಕ್ಕೂ ಜೈ ಬಸವೇಶ್, ಜೈ. ಜೈ ಬಸವೇಶ್, ಬಸವೇಶ್ವರ ಮಹಾರಾಜ್ ಕೀ ಜೈ ಎಂಬ ಘೋಷಣೆಗಳು ಕೇಳಿ ಬಂದವು.

ಚಂದ್ರವಳ್ಳಿ ಕ್ರಾಸ್‌ನಿಂದ ಪ್ರಾರಂಭವಾದ ಬಸವೇಶ್ವರ ಬೈಕ್ ರ್‍ಯಾಲಿ ಹೊಳಲ್ಕೆರೆ ರಸ್ತೆ, ಸಂಗೊಳ್ಳಿ ರಾಯಣ್ಣ ವೃತ್ತ, ಸಂತೇಪೇಟೆ ವೃತ್ತ, ಆನೆಬಾಗಿಲು ಚಿಕ್ಕಪೇಟೆ, ದೊಡ್ಡಪೇಟೆ, ರಂಗಯ್ಯನ ಬಾಗಿಲು ಬಸವಮಂಟಪ,ಡಾ.ಬಿ.ಆರ್.ಅಂಬೇಡ್ಕರ್ ವೃತ್ತ, ಮದಕರಿ ವೃತ್ತ, ಸರ್ಕಾರಿ ಆಸ್ಪತ್ರೆ ಮುಂಭಾಗ, ಕೆಳಗೋಟೆ, ಒನಕೆ ಓಬವ್ವ ವೃತ್ತ, ವಿ.ಪಿ.ಬಡಾವಣೆ, ಜೆಸಿಆರ್ ಬಡಾವಣೆ ಸೇರಿದಂತೆ ನಗರದ ವಿವಿಧ ಬಡಾವಣೆಗಳಲ್ಲಿ ಸಂಚಾರ ಮಾಡುವುದರ ಮೂಲಕ ಏ.30 ರಂದು ನಡೆಯುವ ಬಸವೇಶ್ವರರ ಜಯಂತಿ ಕಾರ್ಯಕ್ರಮಕ್ಕೆ ಎಲ್ಲರನ್ನು ಆಹ್ವಾನ ಮಾಡಲಾಯಿತು.

ಏ. 30ರ ಮಧ್ಯಾಹ್ನ 3 ಗಂಟೆಗೆ ವೀರಶೈವ ಸಮಾಜದ ಹಾಗೂ ಜಿಲ್ಲಾಡಳಿತದವತಿಯಿಂದ ಶ್ರೀ ನೀಲಕಂಠೇಶ್ವರ ದೇವಾಲಯದಿಂದ ಶ್ರೀ ಬಸವೇಶ್ವರ ಭಾವಚಿತ್ರದ ಮೆರವಣಿಗೆ ನಡೆಯಲಿದ್ದು, ಇದರ ಉದ್ಘಾಟನೆಯನ್ನು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹಾಗೂ ಜನಪದ ಕಲಾ ಮೇಳದ ಉದ್ಘಾಟನೆಯನ್ನು ಶಾಸಕರಾದ ಕೆ.ಸಿ.ವಿರೇಂದ್ರ ಪಪ್ಪಿ ಉದ್ಘಾಟನೆ ಮಾಡಲಿದ್ದಾರೆ.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಜಿಲ್ಲಾಧಿಕಾರಿಗಳಾದ ಟಿ.ವೆಂಕಟೇಶ್ ಭಾಗವಹಿಸಲಿದ್ದಾರೆ.

ಮೆರವಣಿಗೆಯಲ್ಲಿ ಸುಮಾರು 10 ರಿಂದ 15 ಕಲಾ ತಂಡಗಳು ಭಾಗವಹಿಸಲಿದ್ದು, ಅಂದುಮಧ್ಯಾಹ್ನ3ಗಂಟೆಯಿಂದಸಚಿವರು, ಶಾಸಕರು ಮೆರವಣಿಗೆಯನ್ನು ಉದ್ಘಾಟನೆ ಮಾಡಿದ ನಂತರ ಮೆರವಣಿಗೆಯೂ ಸಂತೇಪೇಟೆವೃತ್ತ, ಅನೆಬಾಗಿಲು, ಚಿಕ್ಕಪೇಟೆ, ಉಚ್ಚಂಗಿಯಲ್ಲಮ್ಮ ದೇವಾಲಯ, ದೊಡ್ಡಪೇಟೆ, ರಂಗಯ್ಯನಬಾಗಿಲು, ಬಸವಮಂಟಪ,ಗುರುಭವನ,ಡಾ.ಬಿ.ಆರ್. ಅಂಬೇಡ್ಕರ್‌ವೃತ್ತ, ಮಹಾವೀರವೃತ್ತ, ಎಸ್.ಬಿ.ಎಂ.ವೃತ್ತ, ಬಿ.ಡಿ.ರಸ್ತೆಯ ಮೂಲಕ ಮರಳಿ ಶ್ರೀ ನೀಲಕಂಠೇಶ್ವರ ದೇವಾಲಯ ತಲುಪಲಿದೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T